ಭಾನುವಾರ,28.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 114
Digital Varthe Kannada Daily
Volume 01 - Issue 114
Sunday 28.12.2025
Price: 5/- Rs
2 Pages Bangalore

PRGI/RNI: KNKAN/25/A1348


# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ

ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಮಸಾಜ್ ಪಾರ್ಲರ್ ಕೆಲಸದ ಮೇಲೆ ಅನುಮಾನ ಪಟ್ಟು ಕುತ್ತಿಗೆ ಸೀಳಿದ ಪತಿ




**ಬೆಂಗಳೂರು:** ರಾಜಧಾನಿಯ ಸಂಪಿಗೆಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಭಯಾನಕ ಕೊಲೆ ಪ್ರಕರಣವೊಂದು ಬೆಳಕಿಗೆ ಬಂದಿದೆ. ಪತ್ನಿಯ ವೃತ್ತಿಯ ಬಗ್ಗೆ ಅನುಮಾನಗೊಂಡ ಪತಿಯೊಬ್ಬ ಆಕೆಯನ್ನು ಚಾಕುವಿನಿಂದ ಇರಿದು ಭೀಕರವಾಗಿ ಹತ್ಯೆ ಮಾಡಿದ್ದಾನೆ. ಅಗ್ರಹಾರ ಲೇಔಟ್‌ನಲ್ಲಿ ನಡೆದ ಈ ಘಟನೆಯಲ್ಲಿ 39 ವರ್ಷದ ಆಯೇಷಾ ಸಿದ್ದಿಕಿ ಮೃತಪಟ್ಟ ಮಹಿಳೆ. ಆರೋಪಿ ಪತಿ ಸೈಯ್ಯದ್ ಜಬಿ ಸ್ವತಃ ಠಾಣೆಗೆ ಬಂದು ಶರಣಾಗಿದ್ದಾನೆ.

ಆಯೇಷಾ ಸಿದ್ದಿಕಿ ನಗರದ ಮಸಾಜ್ ಪಾರ್ಲರ್ ಒಂದರಲ್ಲಿ ಕೆಲಸ ಮಾಡುತ್ತಿದ್ದರು. ಪತ್ನಿ ಮಸಾಜ್ ಪಾರ್ಲರ್‌ನಲ್ಲಿ ಕೆಲಸ ಮಾಡುವುದು ಸೈಯ್ಯದ್ ಜಬಿಗೆ ಮೊದಲಿನಿಂದಲೂ ಇಷ್ಟವಿರಲಿಲ್ಲ. ಆಕೆ ವೃತ್ತಿಯ ಬಗ್ಗೆ ಪತಿಗೆ ತೀವ್ರ ಆಕ್ಷೇಪವಿತ್ತು ಮತ್ತು ಆಯೇಷಾ ನಡತೆಯ ಮೇಲೆ ಸೈಯ್ಯದ್ ನಿರಂತರವಾಗಿ ಅನುಮಾನ ಪಡುತ್ತಿದ್ದನು. ಈ ವಿಚಾರಕ್ಕೆ ಸಂಬಂಧಿಸಿದಂತೆ ದಂಪತಿಗಳ ನಡುವೆ ದಿನನಿತ್ಯ ಜಗಳ ನಡೆಯುತ್ತಿತ್ತು. ಡಿಸೆಂಬರ್ 26ರ ರಾತ್ರಿ ದಂಪತಿಗಳ ನಡುವೆ ಇದೇ ಕೆಲಸದ ವಿಚಾರಕ್ಕೆ ಮಾತಿಗೆ ಮಾತು ಬೆಳೆದಿದೆ. ಕೆಲಸ ಬಿಡು ಎಂದು ಪತಿ ಪಟ್ಟು ಹಿಡಿದರೆ, ಆಯೇಷಾ ಅದನ್ನು ವಿರೋಧಿಸಿದ್ದಾರೆ. ಈ ವೇಳೆ ಆಕ್ರೋಶಗೊಂಡ ಸೈಯ್ಯದ್ ಜಬಿ, ಮನೆಯಲ್ಲಿದ್ದ ಚಾಕುವನ್ನು ತೆಗೆದುಕೊಂಡು ಆಯೇಷಾ ಕುತ್ತಿಗೆಯನ್ನು ಸೀಳಿದ್ದಾನೆ. ತೀವ್ರ ರಕ್ತಸ್ರಾವದಿಂದ ಆಯೇಷಾ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಆಯೇಷಾಗೆ ಇದು 3ನೇ ಮದುವೆ

ಈ ದಂಪತಿಗಳ ವೈವಾಹಿಕ ಜೀವನದ ಹಿನ್ನೆಲೆ ಕೂಡ ವಿಭಿನ್ನವಾಗಿದೆ. ಮೃತ ಆಯೇಷಾ ಸಿದ್ದಿಕಿಗೆ ಇದು ಮೂರನೇ ಮದುವೆಯಾಗಿತ್ತು. ಇತ್ತ ಆರೋಪಿ ಸೈಯ್ಯದ್ ಜಬಿಗೆ ಇದು ಎರಡನೇ ಮದುವೆಯಾಗಿತ್ತು. ಸುಮಾರು ಮೂರು ತಿಂಗಳ ಹಿಂದಷ್ಟೇ ಈ ಇಬ್ಬರೂ ವಿವಾಹವಾಗಿದ್ದರು.

ಪೊಲೀಸರ ಕ್ರಮ: ಪತ್ನಿಯನ್ನು ಹತ್ಯೆ ಮಾಡಿದ ನಂತರ ರಕ್ತಸಿಕ್ತ ಬಟ್ಟೆಯಲ್ಲೇ ಸೈಯ್ಯದ್ ಜಬಿ ಸಂಪಿಗೆಹಳ್ಳಿ ಪೊಲೀಸ್ ಠಾಣೆಗೆ ತೆರಳಿ ತನ್ನ ತಪ್ಪನ್ನು ಒಪ್ಪಿಕೊಂಡಿದ್ದಾನೆ. ಪೊಲೀಸರು ಕೂಡಲೇ ಆತನನ್ನು ಬಂಧಿಸಿ, ಘಟನಾ ಸ್ಥಳಕ್ಕೆ ಧಾವಿಸಿ ಮಹಜರು ನಡೆಸಿದ್ದಾರೆ. ಪತ್ನಿಯ ನಸಾಜ್ ಪಾರ್ಲರ್ ಕೆಲಸ ಮತ್ತು ನಡತೆಯ ಮೇಲೆ ಉಂಟಾದ ಅನುಮಾನವೇ ಈ ಹತ್ಯೆಗೆ ಮೂಲ ಕಾರಣ ಎಂದು ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ.

## ಗಾನವಿ ಪ್ರಕರಣದಲ್ಲಿ ಮತ್ತೊಂದು ಆಘಾತ: ಪತಿ ಸೂರಜ್ ಆತ್ಮಹತ್ಯೆ



**ಬೆಂಗಳೂರು:** ರಾಜಧಾನಿಯ ರಾಮಮೂರ್ತಿನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವರದಿಯಾಗಿದ್ದ ನವವಿವಾಹಿತೆ ಗಾನವಿ ಅವರ ಆತ್ಮಹತ್ಯೆ ಪ್ರಕರಣಕ್ಕೆ ಮತ್ತೊಂದು ತಿರುವು ಕಂಡಿದೆ. ಗಾನವಿ ಅವರ ಸಾವಿನ ಬೆನ್ನಲ್ಲೇ ಅವರ ಪತಿ ಸೂರಜ್ ಕೂಡ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.
ಇಷ್ಟಕ್ಕೇ ನಿಲ್ಲದ ಈ ಸಾವಿನ ಸರಣಿ, ಮಹಾರಾಷ್ಟ್ರದ ನಾಗ್ಪುರದಲ್ಲಿ ಸೂರಜ್ ಅವರ ತಾಯಿ (ಅತ್ತೆ) ಜಯಂತಿ ಅವರೂ ಸಹ ಆತ್ಮಹತ್ಯೆಗೆ ಯತ್ನಿಸಿದ್ದಾತರೆ. ಕೆಲವೇ ದಿನಗಳ ಹಿಂದೆ ಬೆಂಗಳೂರಿನಲ್ಲಿ ಗಾನವಿ ಎಂಬ ನವವಿವಾಹಿತೆ ಆತ್ಮಹತ್ಯೆ ಮಾಡಿಕೊಂಡಿದ್ದರು. ಈ ಘಟನೆಯ ಬಳಿಕ ರಾಮಮೂರ್ತಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಗಾನವಿ ಸಾವಿನ ಸುತ್ತ ಸಾಕಷ್ಟು ಅನುಮಾನಗಳು ವ್ಯಕ್ತವಾಗಿದ್ದವು ಮತ್ತು ಸಾಮಾಜಿಕವಾಗಿ ಈ ಕುಟುಂಬದ ಮೇಲೆ ಗಂಭೀರ ಆರೋಪಗಳು ಕೇಳಿಬಂದಿದ್ದವು. ಈ ಘಟನೆಯಿಂದ ತೀವ್ರ ಆಘಾತಕ್ಕೊಳಗಾಗಿದ್ದ ಸೂರಜ್ ಕುಟುಂಬವು ಬೆಂಗಳೂರು ಬಿಟ್ಟು ಮಹಾರಾಷ್ಟ್ರದ ನಾಗ್ಪುರಕ್ಕೆ ತೆರಳಿತ್ತು. ಪತ್ನಿಯ ಸಾವಿನ ನಂತರ ಸೂರಜ್ ತೀವ್ರ ಖಿನ್ನತೆಗೆ ಒಳಗಾಗಿದ್ದರು ಎನ್ನಲಾಗಿದೆ. ಗಾನವಿ ಅವರ ಸಾವಿಗೆ ಪತಿ ಮತ್ತು ಅವರ ಕುಟುಂಬದವರೇ ಕಾರಣ ಎಂಬ ಆರೋಪಗಳು ತಾಳಲಾರದೆ ಸೂರಜ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ. ನಾಗ್ಪುರದಲ್ಲಿದ್ದಾಗಲೇ ಸೂರಜ್ ನೇಣು ಬಿಗಿದುಕೊಂಡು ಪ್ರಾಣ ಬಿಟ್ಟಿದ್ದಾರೆ. ಮಗ ಸೂರಜ್ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ಆಘಾತಗೊಂಡ ತಾಯಿ ಜಯಂತಿ ಅವರು ಕೂಡ ನಾಗ್ಪುರದಲ್ಲಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಸದ್ಯ ಜಯಂತಿ ಅವರನ್ನು ಅಲ್ಲಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಸ್ಥಿತಿ ಅತ್ಯಂತ ಗಂಭೀರವಾಗಿದೆ ಎಂದು ಮೂಲಗಳು ತಿಳಿಸಿವೆ. ರಾಮ ಮೂರ್ತಿನಗರ ಪೊಲೀಸರು ಮೊದಲು ಗಾನವಿ ಅವರ ಆತ್ಮಹತ್ಯೆ ಪ್ರಕರಣದ ತನಿಖೆ ನಡೆಸುತ್ತಿದ್ದರು. ಈಗ ಪತಿ ಕೂಡ ಆತ್ಮಹತ್ಯೆ ಮಾಡಿಕೊಂಡಿರುವುದರಿಂದ ಪ್ರಕರಣದ ಸ್ವರೂಪ ಬದಲಾಗಿದೆ. ಗಾನವಿ ಅವರ ಮನೆಯವರು ಸೂರಜ್ ಕುಟುಂಬದ ಮೇಲೆ ನೀಡಿದ್ದ ದೂರು ಮತ್ತು ಈಗ ಸಂಭವಿಸಿರುವ ಈ ಸರಣಿ ಆತ್ಮಹತ್ಯೆಗಳ ನಡುವೆ ಏನಾದರೂ ಸಂಬಂಧವಿದೆಯೇ ಎಂಬ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಇತ್ತಿಚಿಗೆ ಪತ್ನಿ ಆತ್ಮಹತ್ಯೆ ಜೊತೆಗೆ ಇತರೆ ಆರೋಪ ಮತ್ತು ಅವಮಾನಗಳಿಂದ ನೊಂದ ಸೂರಜ್ ಈ ಕ್ರಮ ಕೈಗೊಂಡಿದ್ದಾರೆ. ಗಾನವಿ ಮನೆಯವರು ಮಾಡಿದ ಆರೋಪಗೂ ನಿಜ್ಜಕ್ಕೂ ಸತ್ಯವೇ ಈ ಬಗ್ಗೆ ಸೂರಜ್ ತಾಯಿ ಜಯಂತಿ ಏನು ಹೇಳುತ್ತಾರೆ ಕಾದುನೋಡಬೇಕಿದೆ.

## ಶಾಂತಿ ಚರ್ಚೆಗೂ ಮುನ್ನವೇ ಗುಡುಗಿದ ಸರಣಿ ಸ್ಫೋಟ



**ಕೀವ್:** ಉಕ್ರೇನ್ ಮತ್ತು ರಷ್ಯಾ ನಡುವಿನ ಸಂಘರ್ಷ ನಾಲ್ಕು ವರ್ಷಗಳನ್ನು ಪೂರೈಸುತ್ತಾ ಬಂದಿದ್ದರೂ, ಉದ್ವಿಗ್ನತೆ ಮಾತ್ರ ಕಿಂಚಿತ್ತು ಕಡಿಮೆಯಾಗಿಲ್ಲ. ಮುಂಜಾನೆ ರಷ್ಯಾ ಪಡೆಗಳು ಉಕ್ರೇನ್ ರಾಜಧಾನಿ ಕೀವ್ ಮೇಲೆ ಭಾರಿ ಪ್ರಮಾಣದ ಕ್ಷಿಪಣಿ ಮತ್ತು ಡ್ರೋನ್ ದಾಳಿ ನಡೆಸಿವೆ. ನಗರದ ಆಯಕಟ್ಟಿನ ಪ್ರದೇಶಗಳಲ್ಲಿ ಸರಣಿ ಸ್ಫೋಟಗಳು ಸಂಭವಿಸಿದ್ದು, ಇಡೀ ಕೀವ್ ನಗರವು ಯುದ್ಧದ ಭೀತಿಯಲ್ಲಿ ನಲುಗಿದೆ.

ಸಭೆಯ ಮುನ್ನವೇ ದಾಳಿ ನಡೆದಿದ್ದೇಕೆ? ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಮತ್ತು ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಡುವೆ ಎರಡು ದಿನಗಳ ನಂತರ ಮಹತ್ವದ ಸಭೆ ನಿಗದಿಯಾಗಿದೆ. ಸುಮಾರು ನಾಲ್ಕು ವರ್ಷಗಳಿಂದ ನಡೆಯುತ್ತಿರುವ ಈ ಸುದೀರ್ಘ ಯುದ್ಧವನ್ನು ಕೊನೆಗೊಳಿಸುವ ನಿಟ್ಟಿನಲ್ಲಿ ಶಾಂತಿ ಒಪ್ಪಂದವನ್ನ ರೂಪಿಸುವುದು ಈ ಸಭೆಯ ಮುಖ್ಯ ಉದ್ದೇಶವಾಗಿತ್ತು. ಇಂತಹ ಸಂದರ್ಭದಲ್ಲಿ ರಷ್ಯಾ ದಾಳಿ ನಡೆಸಿರುವುದು ಜಾಗತಿಕ ರಾಜತಾಂತ್ರಿಕ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ.

ಉಕ್ರೇನ್ ಸೇನೆಯ ಪ್ರತಿರೋಧ: ರಷ್ಯಾದ ಈ ಅನಿರೀಕ್ಷಿತ ದಾಳಿಯನ್ನು ಎದುರಿಸಲು ಉಕ್ರೇನ್‌ನ ವಾಯು ರಕ್ಷಣಾ ಪಡೆಗಳು ತಕ್ಷಣವೇ ಕಾರ್ಯಾಚರಣೆಗೆ ಇಳಿದಿವೆ. ರಷ್ಯಾ ಪಡೆಗಳು ಯುದ್ಧ ನೌಕೆಗಳು ಮತ್ತು ಖಂಡಾಂತರ ಕ್ಷಿಪಣಿಗಳನ್ನು ಬಳಸಿ ದಾಳಿ ನಡೆಸುತ್ತಿವೆ ಎಂದು ಉಕ್ರೇನ್ ಸೇನಾ ಮೂಲಗಳು ಖಚಿತಪಡಿಸಿವೆ. ನಮ್ಮ ರಕ್ಷಣಾ ಪಡೆಗಳು ಸನ್ನದ್ಧವಾಗಿದ್ದು, ಶತ್ರುಗಳ ಕ್ಷಿಪಣಿಗಳನ್ನು ಆಕಾಶದಲ್ಲೇ ಹೊಡೆದುರುಳಿಸುವ ಕೆಲಸ ಸಾಗಿದೆ ಎಂದು ಸೇನಾ ವಕ್ತಾರರು ತಿಳಿಸಿದ್ದಾರೆ. ಮತ್ತೊಂದೆಡೆ, ಈ ಭೀಕರ ದಾಳಿಯ ಕುರಿತು ರಷ್ಯಾ ಸರ್ಕಾರ ಅಧಿಕೃತವಾಗಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಶಾಂತಿ ಮಾತುಕತೆಗಳ ಮೂಲಕ ಯುದ್ಧ ನಿಲ್ಲಿಸುವ ಚರ್ಚೆಗಳು ನಡೆಯುತ್ತಿರುವಾಗಲೇ ತನ್ನ ಮಿಲಿಟರಿ ಶಕ್ತಿಯನ್ನು ಪ್ರದರ್ಶಿಸುವ ಮೂಲಕ ರಷ್ಯಾ ತನ್ನ ಪಟ್ಟು ಸಡಿಲಿಸದಿರುವ ಮುನ್ಸೂಚನೆ ನೀಡಿದಂತಿದೆ.

ಕೀವ್ ನಗರದ ವಸತಿ ಸಂಕೀರ್ಣಗಳು ಮತ್ತು ಇಂಧನ ಕೇಂದ್ರಗಳನ್ನು ಗುರಿಯಾಗಿಸಿ ಈ ದಾಳಿ ನಡೆದಿದೆಯೇ ಎಂಬ ಬಗ್ಗೆ ಇನ್ನೂ ಹೆಚ್ಚಿನ ಮಾಹಿತಿ ಲಭ್ಯವಾಗಬೇಕಿದೆ. ಟ್ರಂಪ್ ಮತ್ತು ಝೆಲೆನ್ಸ್ಕಿ ಸಭೆಯ ಮೇಲೆ ಈ ದಾಳಿಯು ಯಾವ ರೀತಿಯ ಪ್ರಭಾವ ಬೀರಲಿದೆ ಎಂಬುದನ್ನ ಕಾಲುನೋಡಬೇಕಿದೆ.

## ಹೆಗ್ಗನಹಳ್ಳಿ ಶಾಲೆಗೆ ಕಾಂಪೌಂಡ್ ಕಟ್ಟಿಸಿ ಜಾಗ ಕಬಳಿಸದಂತೆ ಮಾಡಿದ್ದು ಬೋರೇಗೌಡರು : ಪ್ರೊ. ರಾಜೀವ್ ಗೌಡ




**ಪೀಣ್ಯ ದಾಸರಹಳ್ಳಿ** : 'ಹೆಗ್ಗನಹಳ್ಳಿ ಶಾಲೆಗೆ ಕಾಂಪೌಂಡ್ ಕಟ್ಟಿಸಿಕೊಟ್ಟು ಶಾಲೆಯ ಜಾಗವನ್ನು ಕಬಳಿಸದಂತೆ ತಡೆಗಟ್ಟುವ ಮೂಲಕ ಶಾಲೆಯ ಶ್ರೇಯೋಭಿವೃದ್ಧಿಗೆ ಶ್ರಮಿಸಿದ ಕೀರ್ತಿ ಬೋರೇಗೌಡರವರದ್ದು. ಬೋರೇಗೌಡರವರ ಪ್ರೇರಣೆಯಿಂದ ಅವರ ಪುತ್ರ ಉಮೇಶ್ ಬೋರೇಗೌಡರು ಕೂಡ ಅದೇ ಮಾರ್ಗದಲ್ಲಿ ಅವರ ತಂದೆಯಂತೆಯೇ ಹೆಗ್ಗನಹಳ್ಳಿ ಶಾಲೆಯ ಕಾಯಕಲ್ಪ ಮಾಡುವ ಮೂಲಕ ಆ ಸಂಪ್ರದಾಯವನ್ನು ಮುಂದುವರೆಸಿದ್ದಾರೆ. ಹಾಗೆಯೇ ಆರ್.ಬಿ.ಎಲ್ ಬ್ಯಾಂಕ್ ಕೂಡಬಡ ಹೆಣ್ಣು ಮಕ್ಕಳಿಗೆ ಶಕ್ತಿ ತುಂಬುವಂತಹ ಉತ್ತಮ ಕಾರ್ಯ ಮಾಡುತ್ತಿದೆ. ', ಎಂದು ಮಾಜಿ ರಾಜ್ಯಸಭಾ ಸದಸ್ಯರು ಹಾಗೂ ಎಐಸಿಸಿ ಸಂಶೋಧನಾ ವಿಭಾಗದ ಅಧ್ಯಕ್ಷರಾದ ಪ್ರೊ. ರಾಜೀವ್ ಗೌಡ ಹೇಳಿದರು.

ಹೆಗ್ಗನಹಳ್ಳಿ ಸರ್ಕಾರಿ ಶಾಲೆಯಲ್ಲಿ ಆರ್.ಬಿ.ಎಲ್ ಬ್ಯಾಂಕ್ ಹಾಗೂ ಯು.ಬಿ ಗುಡ್ ಫೌಂಡೇಶನ್ ವತಿಯಿಂದ ಯು.ಬಿ ಗುಡ್ ಫೌಂಡೇಶನ್ ನ ಸಂಸ್ಥಾಪಕ ಅಧ್ಯಕ್ಷರು ಹಾಗೂ ಕಾಂಗ್ರೆಸ್ ಮುಖಂಡರಾದ ಉಮೇಶ್ ಬೋರೇಗೌಡರವರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಬಡ ಪ್ರತಿಭಾವಂತ ಹೆಣ್ಣು ಮಕ್ಕಳಿಗೆ ಉಚಿತ ಸೈಕಲ್ ವಿತರಣೆ ಹಾಗೂ ಕಿಟ್ ವಿತರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾ ಡಿದರು.

ಈ ವೇಳೆ ಮಾತನಾಡಿದ ಯು.ಬಿ ಗುಡ್ ಫೌಂಡೇಶನ್ ವತಿಯಿಂದ ಯು.ಬಿ ಗುಡ್ ಫೌಂಡೇಶನ್ ನ ಸಂಸ್ಥಾಪಕ ಅಧ್ಯಕ್ಷರು ಹಾಗೂ ಕಾಂಗ್ರೆಸ್ ಮುಖಂಡರಾದ ಉಮೇಶ್ ಬೋರೇಗೌಡ, 'ಬೇರೆಯವರಿಗೆ ಸಹಾಯ ಮಾಡಿದಾಗ ಆತ್ಮ ತೃಪ್ತಿ ಸಿಗುತ್ತದೆ. ಆಗ ಮಾತ್ರ ನಮ್ಮ ಜೀವನಕ್ಕೆ ಒಂದು ಸಾರ್ಥಕ ಅರ್ಥ ಬರುತ್ತದೆ. ಸಂಸ್ಥೆಗಳು ಮಾಡುತ್ತಿರುವ ಈ ಸದುಪಯೋಗವನ್ನು ಬಳಸಿಕೊಂಡು ವಿದ್ಯಾರ್ಥಿಗಳು ಉನ್ನತ ಸಾಧನೆ ಮಾಡಬೇಕು. ವಿದ್ಯಾರ್ಥಿಗಳು ಕೂಡ ಮುಂದಿನ ದಿನಗಳಲ್ಲಿ ಸಹಾಯದ ಮನೋಭಾವ ಬೆಳೆಸಿಕೊಳ್ಳಬೇಕು', ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಗ್ಗನಹಳ್ಳಿ ಬ್ಲಾಕ್ ಅಧ್ಯಕ್ಷರಾದ ಜಿ ರಂಗಸ್ವಾಮಿ, ಕಾಂಗ್ರೆಸ್ ಮುಖಂಡರು ಹಾಗೂ ವಿದ್ಯಾಭೂಷಣ್ ಶಾಲೆಯ ಸಂಸ್ಥಾಪಕರಾದ ಬಾ ನಾ ರವಿ, ಕೆಪಿಸಿಸಿ ಸಂಯೋಜಕರಾದ ರಮೇಶ್ ಡಿ, ಪ್ರಧಾನ ಕಾರ್ಯದರ್ಶಿ ಬಸವರಾಜು, ಹೆಗ್ಗನಹಳ್ಳಿ ಬ್ಲಾಕ್ ಯುವ ಕಾಂಗ್ರೆಸ್ ಉಪಾಧ್ಯಕ್ಷರಾದ ಗಿಡ್ಡೇನಹಳ್ಳಿ ಶಶಿಕುಮಾರ್, ವಿಜಯಸೇನೆ ಜಿಲ್ಲಾಧ್ಯಕ್ಷರಾದ ವಾಸುದೇವ್, ರಾಜ್ಯ ಸಂಚಾಲಕರಾದ ಅನಿಲ್ ಗೌಡ, ಉಪ ಪ್ರಾಂಶುಪಾಲರಾದ ಪ್ರಮೀಳಾ, ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಉಮೇಶ್, ಯು.ಬಿ ಗುಡ್ ಫೌಂಡೇಶನ್ ನ ಪದಾಧಿಕಾರಿಗಳಾದ ಜಗದೀಶ್, ವಿನಯ್, ಮುಖಂಡರಾದ ಗಿರೀಶ್, ರೋಹನ್ ಶೆಟ್ಟಿ , ಪುನೀತ್, ದರ್ಶನ್ ಸೇರಿದಂತೆ ಹಲವಾರು ಮುಖಂಡರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಸ್ಫೋಟ ಪ್ರಕರಣ: ತಂಗಿ ಸಾವಿನ ಬಳಿಕ ಅಣ್ಣನು ಸಾವು




**ಮೈಸೂರು:** ಸಾಂ ಸ್ಕೃತಿಕ ನ ಗರಿ ಮೈಸೂ ರಿನ ಅರಮನೆ ಮುಂಭಾಗ ಇತ್ತೀಚೆಗೆ ಸಂಭವಿಸಿದ ಹೀಲಿಯಂ ಗ್ಯಾಸ್ ಸಿಲಿಂಡರ್ ಸ್ಫೋಟದ ತೀವ್ರತೆ ಈಗ ಇಡೀ ರಾಜ್ಯವನ್ನೇ ಬೆಚ್ಚಿಬೀಳಿಸಿದೆ. ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದ ಪ್ರವಾಸಿಗರು ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ಸ್ಫೋಟಕ್ಕೆ ಬಲಿಯಾದವರ ಒಟ್ಟು ಸಂಖ್ಯೆ 3ಕ್ಕೆ ಏರಿಕೆಯಾಗಿದೆ.

ಸಾವಿನಲ್ಲೂ ಜೊತೆಯಾದ ಅಣ್ಣ-ತಂಗಿ: ನಂಜನಗೂಡಿನ ಚಾಮಲಾಪುರದ ನಿವಾಸಿ ಮಂಜುಳಾ ಅವರು ಸ್ಫೋಟದಲ್ಲಿ ಗಂಭೀರವಾಗಿ ಗಾಯಗೊಂಡು ನಿನ್ನೆ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದರು. ಬಳಿಕ ಅವರ ಅಂತ್ಯಕ್ರಿ ನಡೆಸಲಾಯಿತು. ಈ ಬಗ್ಗೆ ಆಸ್ಪತ್ರೆಯಲ್ಲಿದ್ದ ಮಂಜುಳ ಅಣ್ಣ ಪರಮೇಶ್ವರ್‌ರಿಗೆ ಈ ಸುದ್ದಿ ತಿಳಿಯುತ್ತಿದ್ದಂತೆ ತೀವ್ರ ಆಘಾತಕ್ಕೆ ಒಳಗಾಗಿ ಪ್ರಾಣ ಬಿಟ್ಟಿದ್ದಾರೆ. ತಂಗಿಯ ಅಗಲಿಕೆಯ ನೋವನ್ನು ತಡೆಯಲಾರದೆ ಅಣ್ಣನೂ ಮೃತಪಟ್ಟಿರುವುದು ಆಘಾತವಾಗಿದೆ. ಸ್ಫೋಟದಲ್ಲಿ ಗಾಯಗೊಂಡಿದ್ದ ಬೆಂಗಳೂರು ಮೂಲದ ಲಕ್ಷ್ಮಿ ಅವರ ಸ್ಥಿತಿಯೂ ಚಿಂತಾಜನಕವಾಗಿತ್ತು. ಕೆ.ಆರ್. ಆಸ್ಪತ್ರೆಯಲ್ಲಿ ಸಾವು ಬದುಕಿನ ನಡುವೆ ಹೋರಾಡುತ್ತಿದ್ದ ಅವರು ಚಿಕಿತ್ಸೆ ಫಲಕಾರಿಯಾಗದೇ ಇಂದು ಸಾವನ್ನಪ್ಪಿದ್ದಾರೆ. ಮೊದಲೇ ಬಲೂನ್ ವ್ಯಾಪಾರಿ ಸಲೀಂ ಸ್ಥಳದಲ್ಲೇ ಮೃತಪಟ್ಟಿದ್ದನು. ಈ ಸ್ಫೋಟವು ಕೇವಲ ಒಂದು ಆಕಸ್ಮಿಕವೇ ಅಥವಾ ಇದರ ಹಿಂದೆ ಬೇರೇನಾದರೂ ಸಂಚಿದೆಯೇ ಎಂಬ ಬಗ್ಗೆ ಮೈಸೂರು ಪೊಲೀಸರು ತನಿಖೆ ಆರಂಭಿಸಿದ್ದಾರೆ. ಸ್ಫೋಟದ ಹಿಂದಿರುವ ಕಾರಣಗಳು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿವೆ:

ಉತ್ತರ ಪ್ರದೇಶ ಮೂಲದ ಸಲೀಂ ಕಳೆದ 15 ದಿನಗಳಿಂದ ಮೈಸೂರಿನ ಲಷ್ಕರ್ ಮೊಹಲ್ಲಾದ ಖಾಸಗಿ ಲಾಡ್ಜ್‌ನಲ್ಲಿ ವಾಸವಿದ್ದನು. ಆತ ಪ್ರತಿನಿತ್ಯ ಅರಮನೆ, ಕೆ. ಆರ್. ವೃತ್ತ, ಮೃಗಾಲಯ ಹಾಗೂ ಜಗನ್ಮೋಹನ ಅರಮನೆಯಂತಹ ಪ್ರಮುಖ ಪ್ರವಾಸಿ ತಾಣಗಳಲ್ಲೇ ಬಲೂನ್ ಮಾರಾಟ ಮಾಡುತ್ತಿದ್ದನು. ಹೊಸ ವರ್ಷದ ಸಂಭ್ರಮಾಚರಣೆಯ ಹೊತ್ತಲ್ಲೇ ಈ ಘಟನೆ ನಡೆದಿರುವುದು ಮತ್ತು ಅರಮನೆ ಮುಂಭಾಗಕ್ಕೆ ಬಂದ ಕೆಲವೇ ನಿಮಿಷಗಳಲ್ಲಿ ಸಿಲಿಂಡರ್ ಸ್ಫೋಟಗೊಂಡಿರುವುದು ಪೊಲೀಸರಲ್ಲಿ ಸಂಶಯ ಮೂಡಿಸಿದೆ.

ಬೆಳಗ್ಗೆ ಲಾಡ್ಜ್ ಬಿಟ್ಟು ತಡರಾತ್ರಿ ಹಿಂದಿರುಗುತ್ತಿದ್ದ ಸಲೀಂ ಕುರಿತು ಹೆಚ್ಚಿನ ಮಾಹಿತಿ ಕಲೆಹಾಕಲು ಲಾಡ್ಜ್ ದಾಖಲೆಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪ್ರವಾಸಿಗರ ಭದ್ರತೆಯ ದೃಷ್ಟಿಯಿಂದ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಫೋರೆನ್ಸಿಕ್ ತಜ್ಞರ ವರದಿಗಾಗಿ ಕಾಯಲಾಗುತ್ತಿದೆ. ಈ ಘಟನೆಯಿಂದ 3 ಮಂದಿ ಸಾವನ್ನಪ್ಪಿದ್ದು, ಈಗ ಮಂಜುಳಾ ಅಣ್ಣ ಕೂಡ ಸಾವನ್ನಪ್ಪಿರುವುದು ತೀವ್ರ ಬೇಸರದ ಸಂಗತಿಯಾಗಿದೆ.

## ನವಜಾತ ಶಿಶು ಗಾಯ ಪ್ರಕರಣ: ವೈದ್ಯರ ನಿರ್ಲಕ್ಷ್ಯ ಆರೋಪ



**ಹಾವೇರಿ**: ಹಾವೇರಿಯ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ನಡೆದ ಹಸುಗೂಸಿನ ತಲೆಗೆ ಬ್ಲೇಡ್ ತಗುಲಿದ ಆಘಾತಕಾರಿ ಘಟನೆ ನಡೆದಿದೆ. ರಾಣೆಬೆನ್ನೂರು ಮೂಲದ ಮಹಮ್ಮದ್ ಮುಜಾಹೀದ್ ಅವರ ಪತ್ನಿ ಬೀಬಿಅಪ್ಸ್ ಅವರು ತಮ್ಮ ಮೊದಲ ಹೆರಿಗೆಗಾಗಿ ನಿನ್ನೆ ಬೆಳಗ್ಗೆ ಹಾವೇರಿಯ ಸರ್ಕಾರಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಾಗಿದ್ದರು. ತಪಾಸಣೆ ನಡೆಸಿದ ವೈದ್ಯರು, ಸಹಜ ಹೆರಿಗೆ ಸಾಧ್ಯವಿಲ್ಲ, ಸಿಸೇರಿಯನ್ ಮಾಡುವುದು ಅನಿವಾರ್ಯ ಎಂದು ತಿಳಿಸಿದ್ದರು. ಬಳಿಕ ಕುಟುಂಬಸ್ಥರು ಶಸ್ತ್ರಚಿಕಿತ್ಸೆಗೆ ಒಪ್ಪಿದ್ದರು.

ಆಪರೇಷನ್ ಥಿಯೇಟರ್‌ಗೆ ಕರೆದೊಯ್ದ ವೈದ್ಯರು ಶಸ್ತ್ರಚಿಕಿತ್ಸೆ ನಡೆಸುವ ವೇಳೆ ಅತಿಯಾದ ನಿರ್ಲಕ್ಷ್ಯ ತೋರಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಸಿಸೇರಿಯನ್ ಮಾಡುವಾಗ ಬಳಸುವ ಸರ್ಜಿಕಲ್ ಬ್ಲೇಡ್ ನವಜಾತ ಶಿಶುವಿನ ತಲೆಗೆ ತಗುಲಿದೆ. ಇದರಿಂದಾಗಿ ಜನಿಸಿದ ಕೆಲವೇ ಕ್ಷಣಗಳಲ್ಲಿ ಮಗುವಿನ ತಲೆಯಿಂದ ತೀವ್ರ ರಕ್ತಸ್ರಾವವಾಗಿದೆ. ತಾಯಿಯ ಗರ್ಭದಿಂದ ಹೊರಬರುವಾಗಲೇ ಮಗು ತೀವ್ರ ಗಾಯದೊಂದಿಗೆ ಜನಿಸಿದ್ದು ನೋಡಿ ಕುಟುಂಬಸ್ಥರು ಭಯಭೀತರಾಗಿದ್ದಾರೆ.

ವೈದ್ಯರ ಎಡವಟ್ಟಿನಿಂದ ಗಾಯಗೊಂಡ ಶಿಶುವಿನ ಸ್ಥಿತಿ ಆತಂಕಕಾರಿಯಾದ ಹಿನ್ನೆಲೆಯಲ್ಲಿ, ತಕ್ಷಣವೇ ಮಗುವನ್ನು ತೀವ್ರ ನಿಗಾ ಘಟಕಕ್ಕೆ ಸ್ಥಳಾಂತರಿಸಲಾಗಿದೆ. ವೈದ್ಯರ ಈ ನಡೆಯ ಬೇಜವಾಬ್ದಾರಿಯುತ ವಿರುದ್ಧ ಬೀಬಿಅಪ್ಸ್ ಅವರ ಕುಟುಂಬಸ್ಥರು ಆಸ್ಪತ್ರೆಯ ಆವರಣದಲ್ಲಿ ಆಕ್ರೋಶ ಹೊರಹಾಕಿದ್ದಾರೆ. ಮೊದಲ ಮಗು ಹುಟ್ಟಿದ ಖುಷಿಯಲ್ಲಿರಬೇಕಾದ ನಾವು, ಈಗ ಮಗುವಿನ ಪ್ರಾಣ ಉಳಿಸಿಕೊಳ್ಳಲು ಒದ್ದಾಡುತ್ತಿದ್ದೇವೆ ಎಂದು ಪೋಷಕರು ಕಣ್ಣೀರು ಹಾಕಿದ್ದಾರೆ. ರೈಲು ನಿಲ್ದಾಣದಲ್ಲಿ ಪ್ಲಾಟ್‌ಫಾರ್ಮ್ ಬದಲಿಸಲು ಅಡ್ಡ ಹಾದಿ ಹಿಡಿದು ರೈಲು ಹಳಿ ದಾಟುತ್ತಿದ್ದ ಯುವಕನೊಬ್ಬ ಗೂಡ್ಸ್ ರೈಲು ಡಿಕ್ಕಿಯಾಗಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಕಾಸರಗೋಡು ರೈಲ್ವೆ ನಿಲ್ದಾಣದಲ್ಲಿ ನಡೆದಿದೆ.

ಮೃತಪಟ್ಟ ಯುವಕನನ್ನು ಕೊಡಗು ಜಿಲ್ಲೆಯ ವಿರಾಜಪೇಟೆ ತಾಲ್ಲೂಕಿನ ಗೋಣಿಮಾರೂರು ಸಮೀಪದ ಸೋಮವಾರಪುರದ ನಿವಾಸಿ ರಾಜೇಶ್ (35) ಎಂದು ಗುರುತಿಸಲಾಗಿದೆ. ಇವರು ಸೋಮವಾರಪುರದ ಚೆನ್ನಯ್ಯ ಎಂಬುವವರ ಪುತ್ರ ಎಂದು ತಿಳಿದುಬಂದಿದೆ. ರಾಜೇಶ್ ಅವರ ಅಂಗಿಯ ಜೇಬಿನಲ್ಲಿದ್ದ ಆಧಾರ್ ಕಾರ್ಡ್ ಆಧರಿಸಿ ಪೊಲೀಸರು ಗುರುತು ಪತ್ತೆಹಚ್ಚಿದ್ದಾರೆ.

ರಾಜೇಶ್ ಅವರು ಕಾಸರಗೋಡು ರೈಲ್ವೆ ನಿಲ್ದಾಣದಲ್ಲಿ ರೈಲಿನಿಂದ ಇಳಿದು, ಮೇಲ್ಸೇತುವೆಯನ್ನು ಬಳಸುವ ಬದಲಿಗೆ ಅಡ್ಡ ಹಾದಿಯ ಮೂಲಕ ಹಳಿ ದಾಟಿ ಮತ್ತೊಂದು ಪ್ಲಾಟ್‌ಫಾರ್ಮ್ ಹತ್ತಲು ಪ್ರಯತ್ನಿಸಿದ್ದಾರೆ. ಈ ವೇಳೆ ಅದೇ ಹಳಿಯಲ್ಲಿ ವೇಗವಾಗಿ ಬಂದ ಗೂಡ್ಸ್ ರೈಲನ್ನು ಗಮನಿಸದ ರಾಜೇಶ್ ಅವರಿಗೆ ರೈಲು ಡಿಕ್ಕಿ ಹೊಡೆದಿದೆ. ಹೀಗಾಗಿ ರಾಜೇಶ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಸಾಮಾನ್ಯವಾಗಿ ರೈಲ್ವೆ ನಿಲ್ದಾಣಗಳಲ್ಲಿ ಹಳಿ ದಾಟದಂತೆ ಮತ್ತು ಮೇಲ್ಸೇತುವೆ ಬಳಸುವಂತೆ ಪದೇ ಪದೇ ಸೂಚನೆ ನೀಡಿದ್ದರೂ ಅವಸರದಲ್ಲಿ ರಾಜೇಶ್ ಹಳಿ ದಾಟಲು ಮುಂದಾಗಿದ್ದಾನೆ ಇದರಿಂದ ಈ ದುರ್ಘಟನೆ ನಡೆದಿದೆ.

## ಆಪರೇಷನ್ ಆಘಾತ್ 3.0 ಪೊಲೀಸರಿಂದ 600ಕ್ಕೂ ಹೆಚ್ಚು ಮಂದಿ ಬಂಧನ



**ನವದೆಹಲಿ:** ಕೆಂಪು ಕೋಟೆ ಬಳಿ ಕಾರು ಬಾಂಬ್ ಸ್ಫೋಟ ಸಂಭವಿಸಿದ್ದ ಹಿನ್ನೆಲೆ ಈ ಬಾರಿ ಹೊಸ ವರ್ಷಾಚರಣೆಗೆ ಕಟ್ಟೆಚ್ಚರ ವಹಿಸಲಾಗಿದೆ. ಫುಲ್ ಅಲರ್ಟ್ ಆಗಿರುವ ದೆಹಲಿ ಪೊಲೀಸರು ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿಶೇಷ ಕಾರ್ಯಾಚರಣೆ ಕೈಗೊಂಡಿದ್ದಾರೆ. ಅದರಂತೆ ದಕ್ಷಿಣ ಮತ್ತು ಆಗ್ನೇಯ ದೆಹಲಿ ಪೊಲೀಸರು ನಡೆಸಿದಆಪರೇಷನ್ ಆಘಾತ್ 3.0 ವಿಶೇಷ ಕಾರ್ಯಾಚರಣೆಯಲ್ಲಿ 600 ಕ್ಕೂ ಹೆಚ್ಚು ಮಂದಿಯನ್ನ ಬಂಧಿಸಿದ್ದಾರೆ. ರಾತ್ರಿಯಿಡೀ ನಡೆದ ಕಾರ್ಯಾಚರಣೆಯಲ್ಲಿ ಶಸ್ತ್ರಾಸ್ತ್ರ ಕಾಯ್ದೆ , ಅಬಕಾರಿ ಕಾಯ್ದೆ , NDPS ಕಾಯ್ದೆ ಮತ್ತು ಜೂಜಾಟ ಕಾಯ್ದೆ ಸೇರಿದಂತೆ ವಿವಿಧ ಕಾನೂನು ಕ್ರಮಗಳ ಅಡಿಯಲ್ಲಿ ಒಟ್ಟು 285 ಆರೋಪಿಗಳು, ಅಪರಾಧ ತಡೆ ಕ್ರಮದ ಅಡಿಯಲ್ಲಿ 504 ಜನರು ಹಾಗೂ ಕ್ರಿಮಿನಲ್ ಹಿನ್ನೆಲೆಯುಳ್ಳ 116 ಮಂದಿ, ಆಸ್ತಿ ವಿಚಾರಕ್ಕೆ ಗಲಾಟೆ ಮಾಡಿಕೊಂಡ 10 ಮಂದಿ ಹಾಗೂ ಐವರು ಆಟೋ ಕಳ್ಳರನ್ನ ದೆಹಲಿ ಪೊಲೀಸರು ಬಂಧಿಸಿದ್ದಾರೆ.
ಅಲ್ಲದೇ ಭಾರೀ ಪ್ರಮಾಣದ ಶಸ್ತ್ರಾಸ್ತ್ರಗಳು, ಲಕ್ಷಾಂತರ ರೂಪಾಯಿ ಮೌಲ್ಯದ ನಗದು, ಅಕ್ರಮ ಮದ್ಯ, ಮಾದಕ ವಸ್ತುಗಳು ಹಾಗೂ ಇತರ ಕಳ್ಳತನದ ವಸ್ತುಗಳನ್ನ ಜಪ್ತಿ ಮಾಡಿದ್ದಾರೆ. ದೆಹಲಿಯಾದ್ಯಂತ ಅಪರಾಧ ನಿಗ್ರಹಿಸಲು ಹಾಗೂ ಹೊಸ ವರ್ಷಾಚರಣೆ ಹಿನ್ನೆಲೆ ಕಾನೂನು ಸುವ್ಯವಸ್ಥೆ ಬಲಪಡಿಸಲು ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆಪರೇಷನ್ ಆಘಾತ್ ಕಾರ್ಯಾಚರಣೆ ಸಂದರ್ಭದಲ್ಲಿ ಪೊಲೀಸ್ ತಂಡಗಳು ಸುಮಾರು 1,000 ಕ್ಕೂ ಅಧಿಕ ಮಂದಿಯನ್ನ ವಿಚಾರಣೆ ನಡೆಸಿವೆ. ಕಾರ್ಯಾಚರಣೆ ಸಮಯದಲ್ಲಿ 21 ದೇಶೀಯ ನಿರ್ಮಿತ ಪಿಸ್ತೂಲ್, 20 ಜೀವಂತ ಕಾರ್ಟ್ರಿಡ್ಜ್ ಮತ್ತು 27 ಚಾಕುಗಳನ್ನ ಜಪ್ತಿ ಮಾಡಲಾಗಿದೆ. ಒಟ್ಟು 12,258 ಕ್ವಾರ್ಟರ್ಸ್ ಅಕ್ರಮ ಮದ್ಯ, 6.01 ಕೆಜಿ ಗಾಂಜಾವನ್ನೂ ವಶಪಡಿಸಿಕೊಳ್ಳಲಾಗಿದೆ.ಜೂಜು ಅಡ್ಡೆ ಮೇಲೆ ನಡೆದ ದಾಳಿಯಲ್ಲಿ ಒಟ್ಟು 2,30,990 ರೂ. ನಗದು, ಕಳ್ಳತನವಾದ 310 ಮೊಬೈಲ್ ಫೋನ್, 231 ದ್ವಿಚಕ್ರ ವಾಹನಗಳು ಮತ್ತು 1 ನಾಲ್ಕು ಚಕ್ರದ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ. ಮುಂಬರುವ ವಾರಗಳಲ್ಲಿ ಇಂತಹ ವಿಶೇಷ ಡ್ರೈವ್‌ಗಳು ಮುಂದುವರಿಯಲಿವೆ ಎಂದು ದೆಹಲಿ ಪೊಲೀಸರು ಎಚ್ಚರಿಸಿದ್ದಾರೆ.

## ಮಗ ಮನೆಗೆ ಬರುತ್ತಾನೆಂದು ಕಾದ ತಾಯಿಗೆ ಬರಸಿಡಿಲು 10 ದಿನಗಳ ಬಳಿಕ ಪುತ್ರ ಶವವಾಗಿ ಪತ್ತೆ

**ದೇವನಹಳ್ಳಿ:** ಆತನದು ಹದಿಹರಿಯದ ವಯಸ್ಸು. ಈಗಷ್ಟೇ ಕಾಲೇಜು ಮೆಟ್ಟಿಲೇರಿದ್ದ. ಪ್ರಥಮ ಪಿಯುಸಿ ಓದುತ್ತಾ, ಜಾಲಿಯಾಗೆ ಊರ ತುಂಬಾ ಓಡಾಡುತ್ತಿದ್ದ. ಡಿಸೆಂಬರ್ 15ರಂದು ಮನೆಯಿಂದ ಸ್ನೇಹಿತನ ಬೈಕ್ ತೆಗೆದುಕೊಂಡು ಹೋದವನು 10 ದಿನಗಳ ಬಳಿಕ ರಸ್ತೆ ಮೋರಿಯಲ್ಲಿ ಶವವಾಗಿ ಪತ್ತೆಯಾಗಿದ್ದಾನೆ. ಪ್ರೀತಿ ವಿಚಾರಕ್ಕೆ ಯುವತಿ ಕಡೆಯವರಿಂದ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಸದ್ಯ ಯುವಕನ ಸಾವಿನ ಸುತ್ತ ಅನುಮಾನದ ಹುತ್ತ ಬೆಳೆದುಕೊಂಡಿದೆ.

ಅಂದಹಾಗೆ ರಸ್ತೆ ಬದಿಯ ಮೋರಿಯಲ್ಲಿ ಬಿದ್ದು ದುರಂತ ಅಂತ್ಯ ಕಂಡಿರುವ ದುರ್ದೈವಿಯ ಹೆಸರು ನಿಶಾಂಕ್. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡ ಬಳ್ಳಾಪುರ ತಾಲೂಕಿನ ದೊಡ್ಡರಾಯಪ್ಪನಹಳ್ಳಿ ನಿವಾಸಿ ನಿಶಾಂಕ್, 15ರಂದು ಪಕ್ಕದ ಮನೆಯವನ ಬಳಿ ಎನ್‌ಎಸ್ ಪಲ್ಸರ್ ಬೈಕ್ ಪಡೆದು ಒಂದು ರೌಂಡ್ ಅಂತ ಹೊರಟ್ಟಿದ್ದ. ಆದರೆ ಬೆಳಗ್ಗೆ ಮನೆಯಿಂದ ಹೊರಗಡೆ ಹೋದ ನಿಶಾಂಕ್, ಸುಮಾರು ಗಂಟೆಯಾದರು ವಾಪಸ್ ಬಂದಿಲ್ಲ. ಹೀಗಾಗಿ ಎಲ್ಲೆಡೆ ಹುಡುಕಾಡಿದ ಕುಟುಂಬಸ್ಥರು ಕೊನೆಗೆ ಪೊಲೀಸ್ ಠಾಣೆಗೆ ಮಗನ ನಾಪತ್ತೆ ಬಗ್ಗೆ ದೂರು ನೀಡಿ ಕಾದು ಕುಳಿತಿದ್ದರು. ಹೊರಗಡೆ ಹೋಗಿದ್ದ ಯುವಕ ವಾಪಸ್ ಬಂದಿಲ್ಲ. ದೊಡ್ಡಬಳ್ಳಾಪುರ ಚಿಕ್ಕಬಳ್ಳಾಪುರ ರಸ್ತೆಯ ಕಾಲುವೆಯ ಮೋರಿಯಲ್ಲಿ ಬೈಕ್ ಸಮೇತ ಯುವಕನ ಮೃತದೇಹ ಕಂಡುಬಂದಿದೆ. ಮೃತದೇಹ ಕಂಡ ಸ್ಥಳೀಯರು ತಕ್ಷಣ ಪೋಷಕರಿಗೆ ಮತ್ತು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.ಸಹಪಾಠಿ ಜೊತೆ ಚಿಗುರೊಡೆದಿದ್ದ ಪ್ರೀತಿ ಪ್ರಥಮ ಪಿಯುಸಿ ಓದುತ್ತಿದ್ದ ನಿಶಾಂಕ್ ನಿತ್ಯ ಬಸ್‌ನಲ್ಲಿ ಚಿಕ್ಕಬಳ್ಳಾಪುರಕ್ಕೆ ಕಾಲೇಜಿಗೆ ಹೋಗಿ ಬರುತ್ತಿದ್ದ. ಊರಿನಲ್ಲಿ ಜಾಲಿಯಾಗಿ ಓಡಾಡಿಕೊಂಡಿದ್ದ. ಜೊತೆಗೆ ಇತ್ತೀಚೆಗೆ ಕಾಲೇಜಿಗೆ ಹೋಗುತ್ತಿದ್ದ ಸಹಪಾಠಿ ಜೊತೆ ನಿಶಾಂಕ್‌ಗೆ ಪ್ರೀತಿ ಚಿಗುರೊಡೆದಿದ್ದು , ಕಾಲೇಜು ಬಳಿ ಹುಡುಗಿ ಕಡೆಯವರು ವಾರ್ನಿಂಗ್ ನೀಡಿದ್ದರು ಎನ್ನಲಾಗಿದೆ.

ಅಲ್ಲದೆ ನಿಶಾಂಕ್ ನಾಪತ್ತೆಯಾದ ಹಿಂದಿನ ದಿನ ಹುಡುಗಿ ಜೊತೆಯಾಗಿರುವ ಫೋಟೋವನ್ನು ಇನ್ಸ್ಟಾಗ್ರಾಮ್‌ನಲ್ಲಿ ಹಾಕಿ ಆಕೆಯ ಹುಟ್ಟುಹಬ್ಬಕ್ಕೆ ಶುಭಾಶಯ ಸಹ ಕೋರಿದ್ದನಂತೆ. ಹೀಗಾಗಿ ಹುಡುಗಿ ಮನೆ ಕಡೆಯವರೆ ನಮ್ಮ ಹುಡುಗನನ್ನ ಕೊಲೆ ಮಾಡಿರಬಹುದು ಅಂತ ಮೃತನ ಮನೆಯವರು ಗಂಭೀರ ಆರೋಪ ಮಾಡಿದ್ದಾರೆ. ಅಲ್ಲದೆ ನಾಪತ್ತೆಯಾದ 10 ದಿನಗಳ ಬಳಿಕ ನಿಶಾಂಕ್ ನನ್ನ ಕೊಲೆ ಮಾಡಿ ತಂದು ಮೋರಿ ಕೆಳಗಡೆ ಬಿಸಾಡಿದ್ದು , ಇದು ಅಪಘಾತವಲ್ಲ ಕೊಲೆ ಅಂತ ನಿಶಾಂಕ್ ಮನೆಯವರು ಶಂಕೆ ವ್ಯಕ್ತಪಡಿಸಿದ್ದಾರೆ. ಸದ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸರು ಮತ್ತು ಸೊಕೋ ಟೀಂ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಅಲ್ಲದೆ ಮೃತನ ಪೋಷಕರ ಆರೋಪದ ಬಗ್ಗೆಯೂ ಪೊಲೀಸರು ತನಿಖೆ ನಡೆಸುತ್ತಿದ್ದು , ವಿದ್ಯಾರ್ಥಿಯದ್ದು ಆಕಸ್ಮಿಕ ಸಾವೋ ಅಥವಾ ಕೊಲೆಯೋ ಎನ್ನುವುದನ್ನು ಪೊಲೀಸರ ತನಿಖೆಯಿಂದ ಹೊರಬರಬೇಕಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲು ಮುಂದಾದ ರಾಮಲಿಂಗಾ ರೆಡ್ಡಿ

**ಬೆಂಗಳೂರು:** ಚಿತ್ರದುರ್ಗದ ಹಿರಿಯೂರು ಬಳಿ ಸಂಭವಿಸಿದ ಭೀಕರ ಬಸ್ ಅಪಘಾತದಲ್ಲಿ ಏಳು ಮಂದಿ ಸಜೀವ ದಹನಗೊಂಡ ಘಟನೆ ರಾಜ್ಯದ ಜನತೆಯನ್ನು ನಡುಗಿಸಿದೆ. ಈ ದುರಂತದ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ, ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಾತ್ರಿ ಅವಧಿಯ ಸಂಚಾರದ ಸುರಕ್ಷತೆ ಕುರಿತು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲು ನಿರ್ಧರಿಸಿದ್ದಾರೆ. ಇತ್ತೀಚಿನ ದಿನಗಳಲ್ಲಿ ಸಂಭವಿಸುತ್ತಿರುವ ಹೆಚ್ಚಿನ ರಸ್ತೆ ಅಪಘಾತಗಳು ಮಧ್ಯರಾತ್ರಿಯ ನಂತರವೇ ನಡೆಯುತ್ತಿವೆ.

ಇದಕ್ಕೆ ಚಾಲಕರು ನಿದ್ರೆ ಮಂಪರಿನಲ್ಲಿ ವಾಹನ ಚಾಲನೆ ಮಾಡುವುದೇ ಪ್ರಮುಖ ಕಾರಣ ಎಂದು ಸಚಿವ ರಾಮಲಿಂಗರೆಡ್ಡಿ ಅಭಿಪ್ರಾಯಪಟ್ಟಿದ್ದಾರೆ. ಚಾಲಕರು ನಿದ್ದೆ ಬರುವಾಗ ಬಲವಂತವಾಗಿ ವಾಹನ ಚಾಲನೆ ಮಾಡುವುದರಿಂದ ಅನಾಹುತಗಳು ಸಂಭವಿಸುತ್ತಿವೆ. ಇದನ್ನು ತಡೆಯಲು ರಾತ್ರಿ ಸಮಯದಲ್ಲಿ ಕಡ್ಡಾಯ ವಿಶ್ರಾಂತಿಯ ಅಗತ್ಯವಿದೆ ಎಂದು ಸಚಿವ ತಿಳಿಸಿದ್ದಾರೆ. ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಿರುವ ಪತ್ರದಲ್ಲಿ ಸಚಿವರು ಕೆಲವು ಪ್ರಮುಖ ಅಂಶಗಳನ್ನು ಉಲ್ಲೇಖಿಸಲಿದ್ದಾರೆ:



ಕಡ್ಡಾಯ ವಿಶ್ರಾಂತಿ: ಮಧ್ಯರಾತ್ರಿ 12 ಗಂಟೆಯಿಂದ ಬೆಳಗಿನ ಜಾವ 4 ಗಂಟೆಯವರೆಗೆ ಚಾಲಕರು ವಾಹನಗಳನ್ನು ನಿಲ್ಲಿಸಿ ವಿಶ್ರಾಂತಿ ಪಡೆಯುವಂತೆ ಹೊಸ ಮಾರ್ಗಸೂಚಿ ರೂಪಿಸಬೇಕು.

ಹೈವೇ ಬೇಸ್‌ಗಳ ಬಳಕೆ: ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ವಿಶ್ರಾಂತಿ ತಾಣಗಳಲ್ಲಿ ಚಾಲಕರು ಕನಿಷ್ಠ ನಾಲ್ಕು ಗಂಟೆಗಳ ಕಾಲ ನಿದ್ದೆ ಮಾಡಲು ಅವಕಾಶ ಕಲ್ಪಿಸಬೇಕು. ಟ್ರಕ್ ಮತ್ತು ಲಾರಿ ಚಾಲಕರಿಗೆ ಆದ್ಯತೆ: ಬಸ್‌ಗಳಲ್ಲಿ ಸಾಮಾನ್ಯವಾಗಿ ಇಬ್ಬರು ಚಾಲಕರಿರುತ್ತಾರೆ, ಆದರೆ ಟ್ರಕ್ ಮತ್ತು ಲಾರಿಗಳಲ್ಲಿ ಒಬ್ಬರೇ ಚಾಲಕರಿರುತ್ತಾರೆ. ಅಂತಹ ಸಂದರ್ಭಗಳಲ್ಲಿ ಅಪಘಾತದ ಅಪಾಯ ಹೆಚ್ಚಿರುವುದರಿಂದ ಕೇಂದ್ರ ಸರ್ಕಾರ ಈ ಬಗ್ಗೆ ವಿಶೇಷ ಗಮನಹರಿಸಬೇಕು.

ಬ್ಲ್ಯಾಕ್ ಸ್ಪಾಟ್‌ಗಳ ಮೇಲೆ ನಿಗಾ: ಹಿರಿಯೂರಿನಲ್ಲಿ ಅಪಘಾತ ನಡೆದ ಸ್ಥಳವು 'ಬ್ಲ್ಯಾಕ್ ಸ್ಪಾಟ್' ಆಗಿ ಪರಿಣಮಿಸಿದ್ದು, ಅಲ್ಲಿ ಪದೇ ಪದೇ ಅಪಘಾತಗಳು ಸಂಭವಿಸುತ್ತಿವೆ. ಈ ಬಗ್ಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಮಾಹಿತಿ ನೀಡಿ, ರಸ್ತೆಯ ವಿನ್ಯಾಸದಲ್ಲಿ ಏನಾದರೂ ದೋಷವಿದೆಯೇ ಅಥವಾ ಸುರಕ್ಷತಾ ಕ್ರಮಗಳ ಕೊರತೆಯಿದೆಯೇ ಎಂಬುದನ್ನು ಪರಿಶೀಲಿಸಲು ಸಚಿವರು ಸೂಚಿಸಿದ್ದಾರೆ.

ಚಾಲಕರಿಗೆ ಕಿವಿಮಾತು: ರಾತ್ರಿ ಪ್ರಯಾಣ ಮಾಡುವವರು ಸಂಜೆಯೇ ಸರಿಯಾಗಿ ನಿದ್ರೆ ಮಾಡಿ ನಂತರ ಪ್ರಯಾಣ ಆರಂಭಿಸುವುದು ಉತ್ತಮ. ಒಂದು ವೇಳೆ ಚಾಲನೆ ಮಾಡುವಾಗ ನಿದ್ದೆ ಬಂದರೆ, ವಾಹನವನ್ನು ಸುರಕ್ಷಿತ ಜಾಗದಲ್ಲಿ ನಿಲ್ಲಿಸಿ ಮುಖ ತೊಳೆದು ಅಥವಾ ಸ್ವಲ್ಪ ಸಮಯ ವಿಶ್ರಾಂತಿ ಪಡೆದು ಮುಂದೆ ಸಾಗಬೇಕು ಎಂದು ಸಚಿವ ರಾಮಲಿಂಗರೆಡ್ಡಿ ಮನವಿ ಮಾಡಿದ್ದಾರೆ.

# ಸಿರಿಯಾದ ಮಸೀದಿಯಲ್ಲಿ ಭೀಕರ ಬಾಂಬ್ ಸ್ಫೋಟ: ಪ್ರಾರ್ಥನೆ ವೇಳೆ 8 ಮಂದಿ ಸಾವು




**ಡಮಾಸ್ಕಸ್:** ಸಿರಿಯಾದಲ್ಲಿ ಮತ್ತೊಂದು ಭೀಕರ ಘಟನೆ ಸಂಭವಿಸಿದೆ. ದೇಶದ ಹೋಮ್ಸ್ ನಗರದಲ್ಲಿರುವ ಮಸೀದಿಯೊಂದರಲ್ಲಿ ಶುಕ್ರವಾರ ಮಧ್ಯಾಹ್ನ ಭಾರೀ ಸ್ಫೋಟ ಸಂಭವಿಸಿದ್ದು, ಕನಿಷ್ಠ 8 ಮಂದಿ ಮೃತಪಟ್ಟಿದ್ದಾರೆ. ಘಟನೆಯಲ್ಲಿ 18ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದು, ಹಲವರ ಸ್ಥಿತಿ ಗಂಭೀರವಾಗಿದೆ. ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು, ಕೆಲವರು ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ.

ಹೋಮ್ಸ್ ಸಿಟಿಯ ಅಲವೈಟ್ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶದಲ್ಲಿರುವ ಇಮಾಮ್ ಅಲಿ ಬಿನ್ ಅಬಿ ತಾಲಿಬ್ ಮಸೀದಿಯೊಳಗೆ ಈ ಸ್ಫೋಟ ಸಂಭವಿಸಿದೆ. ಶುಕ್ರವಾರದ ಪ್ರಾರ್ಥನೆಯ ಸಮಯದಲ್ಲೇ ದಾಳಿ ನಡೆದಿರುವುದು ಶಂಕೆ ಹುಟ್ಟಿಸಿದೆ. ಈ ಹಿನ್ನೆಲೆಯಲ್ಲಿ ಇದನ್ನು ಪೂರ್ವನಿಯೋಜಿತ ಭಯೋತ್ಪಾದಕ ಕೃತ್ಯ ಎಂದು ಸಿರಿಯಾದ ಆಂತರಿಕ ಸಚಿವಾಲಯ ಖಚಿತಪಡಿಸಿದೆ. ಪ್ರಾಥಮಿಕ ತನಿಖೆಯ ಪ್ರಕಾರ, ಮಸೀದಿಯೊಳಗೆ ಈಗಾಗಲೇ ಸ್ಫೋಟಕ ವಸ್ತುಗಳನ್ನು ಇರಿಸಲಾಗಿದ್ದು, ಅವು ಪ್ರಾರ್ಥನೆ ವೇಳೆ ಸ್ಫೋಟಗೊಂಡಿವೆ ಎಂದು ತಿಳಿದುಬಂದಿದೆ. ಸ್ಫೋಟದಿಂದ ಮಸೀದಿಯ ಗೋಡೆಯಲ್ಲಿ ದೊಡ್ಡ ರಂಧ್ರ ಉಂಟಾಗಿದ್ದು, ಮಸೀದಿಯ ಒಳಗಡೆ ಕಾರ್ಪೆಟ್‌ಗಳು, ಧಾರ್ಮಿಕ ಪುಸ್ತಕಗಳು ಹಾಗೂ ವಸ್ತುಗಳು ಚದುರಿಕೊಂಡಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.

ಘಟನೆಯ ಬಳಿಕ ಭದ್ರತಾ ಪಡೆಗಳು ತಕ್ಷಣ ಸ್ಥಳಕ್ಕೆ ಧಾವಿಸಿ, ಪರಿಶೀಲಿಸುತ್ತಿದ್ದಾರೆ. ಬಾಂಬ್ ನಿಷ್ಕ್ರಿಯ ದಳ ಹಾಗೂ ತನಿಖಾ ತಂಡಗಳನ್ನು ನಿಯೋಜಿಸಲಾಗಿದ್ದು, ಯಾವುದೇ ಅನುಮಾನಾಸ್ಪದ ವಸ್ತುಗಳಿಗಾಗಿ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ. ಹೋಮ್ಸ್ ನಗರದಲ್ಲಿ ಭದ್ರತೆ ಹೆಚ್ಚಿಸಲಾಗಿದ್ದು, ಜನರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ.

ಸ್ಥಳೀಯ ನಿವಾಸಿಯೊಬ್ಬರು ಘಟನೆ ಕುರಿತು ಮಾತನಾಡಿ, "ಒಂದೇ ಕ್ಷಣದಲ್ಲಿ ಭೀಕರ ಸ್ಫೋಟದ ಶಬ್ದ ಕೇಳಿಬಂತು. ಎಲ್ಲೆಡೆ ಗೊಂದಲ ಉಂಟಾಯಿತು. ಜನರು ಭಯದಿಂದ ಮನೆಗಳಿಂದ ಹೊರಬರಲು ಹೆದರುತ್ತಿದ್ದಾರೆ. ಆಂಬ್ಯುಲೆನ್ಸ್‌ಗಳ ಸೈರನ್ ಶಬ್ದವೇ ಸುತ್ತಮುತ್ತ ತುಂಬಿಕೊಂಡಿದೆ" ಎಂದು ಹೇಳಿದರು. ಸಿರಿಯಾದ ವಿದೇಶಾಂಗ ಸಚಿವಾಲಯ ಈ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದು, "ಇದು ಮಾನವೀಯತೆ ಹಾಗೂ ನೈತಿಕ ಮೌಲ್ಯಗಳ ಮೇಲೆ ನಡೆದ ಹೇಡಿತನದ ದಾಳಿ. ಸಿರಿಯಾವನ್ನು ಅಸ್ಥಿರಗೊಳಿಸುವ ಮತ್ತು ಜನರ ಮನೋಬಲ ಕುಗ್ಗಿಸುವ ಹತಾಶ ಪ್ರಯತ್ನಗಳ ಭಾಗವಾಗಿದೆ" ಎಂದು ಹೇಳಿಕೆಯಲ್ಲಿ ತಿಳಿಸಿದೆ.

# ಕುಡಿದು ಬಸ್ ಚಾಲನೆ ಮಾಡ್ತಿದ್ದ ಸೀಬರ್ಡ್ ಬಸ್ ಡ್ರೈವರ್ ಅರೆಸ್ಟ್



**ಬೆಂಗಳೂರು:** ಚಿತ್ರದುರ್ಗದ ಹಿರಿಯೂರು ಸಮೀಪ ನಡೆದ ಸೀಬರ್ಡ್ ಬಸ್‌ನ ಭೀಕರ ದುರಂತದ ಕಹಿ ನೆನಪುಗಳು ಮಾಸುವ ಮುನ್ನವೇ, ಅದೇ ಸಂಸ್ಥೆಯ ಮತ್ತೊಬ್ಬ ಚಾಲಕನ ನಿರ್ಲಕ್ಷ್ಯ ಬೆಳಕಿಗೆ ಬಂದಿದೆ. ನೂರಾರು ಪ್ರಯಾಣಿಕರ ಪ್ರಾಣವನ್ನು ಒತ್ತೆಯಿಟ್ಟು, ಮದ್ಯದ ಅಮಲಿನಲ್ಲಿ ಬಸ್ ಚಾಲನೆ ಮಾಡುತ್ತಿದ್ದ ಸೀಬರ್ಡ್ ಬಸ್ ಚಾಲಕನನ್ನು ಬೆಂಗಳೂರಿನ ಪೊಲೀಸರು ವಶಕ್ಕೆ ಪಡೆದಿದ್ದಾರೆ.



ರಾಜಧಾನಿ ಬೆಂಗಳೂರಿನಿಂದ ಗೋವಾಕ್ಕೆ ಹೊರಟಿದ್ದ ಖಾಸಗಿ ಸೀಬರ್ಡ್ ಬಸ್ ಅನ್ನು ಉಪ್ಪಾರಪೇಟೆ ಸಂಚಾರ ಠಾಣೆ ಪೊಲೀಸರು ಸಾಮಾನ್ಯ ತಪಾಸಣೆಯ ಭಾಗವಾಗಿ ತಡೆದರು. ಇತ್ತೀಚೆಗೆ ನಡೆದ ಬಸ್ ಅಪಘಾತಗಳ ಹಿನ್ನೆಲೆಯಲ್ಲಿ ಸಂಚಾರ ಪೊಲೀಸರು ನಗರದಾದ್ಯಂತ ಡ್ರಿಂಕ್ ಅಂಡ್ ಡ್ರೈವ್ ತಪಾಸಣೆಯನ್ನು ತೀವ್ರಗೊಳಿಸಿದ್ದರು. ಈ ವೇಳೆ ಬಸ್ ಚಾಲಕನ ಮೇಲೆ ಅನುಮಾನ ಬಂದು ಆಲ್ಕೋಮೀಟರ್ ಪರೀಕ್ಷೆ ನಡೆಸಿದಾಗ, ಆತ ಮಿತಿಮೀರಿ ಮದ್ಯಪಾನ ಮಾಡಿರುವುದು ದೃಢಪಟ್ಟಿದೆ.

ಸೀಬರ್ಡ್ ಬಸ್ ಸಂಸ್ಥೆಯು ಪದೇ ಪದೇ ಇಂತಹ ವಿವಾದಗಳಿಗೆ ಸಿಲುಕುತ್ತಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಹಿರಿಯೂರು ದುರಂತದಲ್ಲಿ ಅನೇಕ ಅಮಾಯಕರು ಪ್ರಾಣ ಕಳೆದುಕೊಂಡಿದ್ದರೂ, ಚಾಲಕರು ಮಾತ್ರ ಇಂದಿಗೂ ಎಚ್ಚೆತ್ತುಕೊಂಡಿಲ್ಲ ಎಂಬುದಕ್ಕೆ ಈ ಘಟನೆಯೇ ಸಾಕ್ಷಿ. ಕುಡಿದ ಅಮಲಿನಲ್ಲಿ ಘಟ್ಟ ಪ್ರದೇಶಗಳನ್ನು ದಾಟಿ ಗೋವಾಕ್ಕೆ ಬಸ್ ಹೊರಟಿದ್ದರೆ ಮತ್ತೊಂದು ಅಪಘಾತ ಆಗುವ ಸಾಧ್ಯತೆ ಹೆಚ್ಚಿತ್ತು. ತಕ್ಷಣವೇ ಕಾರ್ಯಪ್ರವೃತ್ತರಾದ ಉಪ್ಪಾರಪೇಟೆ ಪೊಲೀಸರು ಮದ್ಯಪಾನ ಮಾಡಿದ್ದ ಚಾಲಕನನ್ನು ವಶಕ್ಕೆ ಪಡೆದು, ಬಸ್ ಅನ್ನು ಜಪ್ತಿ ಮಾಡಿದರು. ಬಳಿಕ ಪ್ರಯಾಣಿಕರಿಗೆ ತೊಂದರೆಯಾಗದಂತೆ ಸಂಸ್ಥೆಯ ಕಡೆಯಿಂದ ಮತ್ತೊಬ್ಬ ಚಾಲಕನನ್ನು ಕರೆಸಿ, ಸೂಕ್ತ ತಪಾಸಣೆಯ ನಂತರ ಬಸ್ ಅನ್ನು ಗೋವಾಕ್ಕೆ ಕಳಿಸಿಕೊಡಲಾಯಿತು.


ಚಾಲಕನ ವಿರುದ್ಧ ಪ್ರಕರಣ ದಾಖಲಾಗಿದ್ದು, ಆತನ ಲೈಸೆನ್ಸ್ ರದ್ದುಗೊಳಿಸುವಂತೆ ಶಿಫಾರಸು ಮಾಡಲಾಗಿದೆ. ಖಾಸಗಿ ಬಸ್ ಸಂಸ್ಥೆಗಳು ಲಾಭದ ಹಪಾಹಪಿಗೆ ಬಿದ್ದು ಚಾಲಕರ ಆರೋಗ್ಯ ಮತ್ತು ನಡವಳಿಕೆಯನ್ನು ಸರಿಯಾಗಿ ಪರಿಶೀಲಿಸುತ್ತಿಲ್ಲ ಎಂಬ ಆರೋಪ ಕೇಳಿಬರುತ್ತಿದೆ. ವಾರಾಂತ್ಯದ ಸಮಯದಲ್ಲಿ ಗೋವಾ, ಕಾರವಾರದಂತಹ ಪ್ರವಾಸಿ ತಾಣಗಳಿಗೆ ನೂರಾರು ಜನರು ಈ ಬಸ್‌ಗಳನ್ನು ಅವಲಂಬಿಸುತ್ತಾರೆ. ಆದರೆ ಇಂತಹ ಘಟನೆಗಳು ಪ್ರಯಾಣಿಕರಲ್ಲಿ ಭೀತಿಯನ್ನು ಹುಟ್ಟಿಸಿವೆ. ಈ ಬಗ್ಗೆ ವಾಹನ ಚಾಲಕರು ಸಹ ಗಮನಹರಿಬೇಕಾಗಿದೆ. ಇದರಿಂದ ಎಷ್ಟೋ ಅಪಘಾತಗಳು ತಪ್ಪಲು ಸಹಕಾರಿಯಾಗುತ್ತದೆ.

# ಬಲೂನು ಮಾರಾಟಗಾರನಿಗಿತ್ತು 5 ಎಕ್ರೆ ಜಮೀನು

**ಮೈಸೂರು:** ಅರಮನೆ ಆವರಣದಲ್ಲಿನಡೆದ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಚುರುಕೊಂಡಿದ್ದು ಮೃತ ಸಲೀಂ ಉತ್ತರ ಪ್ರದೇಶದಲ್ಲಿ 5 ಎಕ್ರೆ ಜಮೀನು ಹೊಂದಿದ್ದ ವಿಚಾರ ಬೆಳಕಿಗೆ ಬಂದಿದೆ. ಉತ್ತರ ಪ್ರದೇಶದ ಪೊಲೀಸರ ಜೊತೆಗೆ ಮೈಸೂರು ಪೊಲೀಸರು ನಿರಂತರ ಸಂಪರ್ಕದಲ್ಲಿದ್ದು ಸಲೀಂ ಹಿನ್ನೆಲೆ ಬಗ್ಗೆ ಆಳವಾದ ತನಿಖೆ ಶುರುವಾಗಿದೆ. ಕನೋಜ್ ಜಿಲ್ಲೆಯ ತೊಫಿಯಾ ಗ್ರಾಮದ ನಿವಾಸಿಯಾಗಿರುವ ಸಲೀಂ ಊರಿನಲ್ಲಿ ಕೃಷಿ ಮಾಡುತ್ತಿದ್ದ. ಈತನಿಗೆ 5 ಎಕ್ರೆ ಜಮೀನು ಇದ್ದು ಇಷ್ಟು ವರ್ಷ ಕೃಷಿ ಕೆಲಸವನ್ನೇ ಮಾಡುತ್ತಿದ್ದ. ಕೃಷಿ ಕೆಲಸ ಬಿಟ್ಟು ಒಂದು ತಿಂಗಳ ಹಿಂದೆ ಮೈಸೂರಿಗೆ ಸಲೀಂ ಬಂದಿದ್ದ ಕೃಷಿ ಕೆಲಸ ಬಿಟ್ಟು ಮೈಸೂರಿಗೆ ಬಲೂನ್ ಮಾರಾಟ ಮಾಡಲು ಬಂದಿದ್ದು ಯಾಕೆ ಎಂಬ ಮಾಹಿತಿಯನ್ನು ಸಲೀಂ ಕುಟುಂಬಸ್ಥರಿಂದ ಈಗ ಪೊಲೀಸರು ಸಂಗ್ರಹಿಸುತ್ತಿದ್ದಾರೆ. 5 ಎಕ್ರೆ ಜಮೀನು ಇದ್ದರೂ ಬಲೂನು ಮಾರಾಟಕ್ಕೆ ಇಳಿದ್ದಿದ್ದು ಯಾಕೆ? ಅದರಲ್ಲೂ ಮೈಸೂರಿಗೆ ಬಂದು ಮಾರಾಟಕ್ಕೆ ಇಳಿದಿದ್ದು ಯಾಕೆ ಎನ್ನುವ ಪ್ರಶ್ನೆಗೆ ಉತ್ತರ ಸಿಗಬೇಕಿದೆ.

# ಅಧಿಕಾರ ಬಿಟ್ಟು ಕೊಟ್ರೇ ಮಾತ್ರ ಡಿಕೆಶಿಗೆ ಸಿಎಂ ಭಾಗ್ಯ ಭವಿಷ್ಯ ನುಡಿದ ಕೋಡಿ ಶ್ರೀಗಳು

**ಬೆಳಗಾವಿ:** ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಸ್ಥಾನಕ್ಕೆ ಸಂಬಂಧಿಸಿದಂತೆ ಭಾರೀ ಚರ್ಚೆ ನಡೆಯುತ್ತಿರುವ ನಡುವೆಯೇ, ಕೋಡಿಮಠದ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿಗಳು ನೀಡಿದ ಸ್ಫೋಟಕ ಭವಿಷ್ಯ ನುಡಿದಿದ್ದಾರೆ. "ಸಿದ್ದರಾಮಯ್ಯ ಅವರು ತಾವಾಗಿಯೇ ಅಧಿಕಾರ ಬಿಟ್ಟು ಕೊಟ್ಟರೆ ಮಾತ್ರ ಡಿಕೆ ಶಿವಕುಮಾರ್‌ಗೆ ಸಿಎಂ ಭಾಗ್ಯ ಸಾಧ್ಯ. ಇಲ್ಲದಿದ್ದರೆ ಅದೊಂದು ಅಸಾಧ್ಯ ಕನಸು" ಎಂದು ಕೋಡಿ ಶ್ರೀಗಳು ಸ್ಪಷ್ಟವಾಗಿ ಹೇಳಿದ್ದಾರೆ.



ಬೆಳಗಾವಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಕೋಡಿ ಶ್ರೀಗಳು, ಹಾಲುಮತ ಸಮಾಜದಿಂದ ಅಧಿಕಾರ ಕಿತ್ತುಕೊಳ್ಳುವುದು ಅಷ್ಟೇನು ಸುಲಭವಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. "ಸಿದ್ದರಾಮಯ್ಯ ಅವರ ಹಿಂದೆ ಬಲಿಷ್ಠ ಸಾಮಾಜಿಕ ಬೆಂಬಲವಿದೆ. ಆ ಶಕ್ತಿಯಿಂದ ಅಧಿಕಾರ ಕಿತ್ತುಕೊಳ್ಳಲು ಪ್ರಯತ್ನಿಸಿದರೆ ರಾಜಕೀಯವಾಗಿ ಕಷ್ಟ ಎದುರಾಗುತ್ತದೆ" ಎಂದು ಹೇಳಿದ್ದಾರೆ.

ಅರಸನ ಅರಮನೆಗೆ ಕಾರ್ಮೋಡ? ರಾಜಕೀಯ ಭವಿಷ್ಯವನ್ನು ವಿವರಿಸಿದ ಕೋಡಿ ಶ್ರೀಗಳು, "ಅರಸನ ಅರಮನೆಗೆ ಕಾರ್ಮೋಡ ಕವಿದಿದೆ. ಅರಸನ ಬಂಡಾರವೇ ಬಜೆಟ್" ಎಂದು ಹೇಳಿದ್ದಾರೆ. ಇದರರ್ಥ, ವರ್ಷದ ಬಜೆಟ್ ಪ್ರಕ್ರಿಯೆ ಮುಗಿದ ನಂತರವೇ ಅಧಿಕಾರ ಬದಲಾವಣೆ ಸಾಧ್ಯತೆಗಳ ಬಗ್ಗೆ ಯೋಚನೆ ಆಗಬಹುದು ಎಂಬುದಾಗಿದೆ. "ಬಜೆಟ್ ಮುಗಿದ ಬಳಿಕ ಸಿದ್ದರಾಮಯ್ಯ ಅವರಾಗಿ ಸ್ಥಾನ ಬಿಟ್ಟು ಕೊಟ್ಟರೆ ಮಾತ್ರ ಬೇರೆಯವರಿಗೆ ಅವಕಾಶ ಸಿಗಬಹುದು. ಇಲ್ಲದಿದ್ದರೆ ಕಷ್ಟವೇ" ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಕೇಂದ್ರ ರಾಜಕೀಯದ ಬಗ್ಗೆಯೂ ಭವಿಷ್ಯ ನುಡಿದ ಸ್ವಾಮೀಜಿ, "ಕೇಂದ್ರದಲ್ಲಿಯೂ ತಕ್ಷಣದ ಬದಲಾವಣೆ ಸಾಧ್ಯತೆ ಕಡಿಮೆ" ಎಂದು ಹೇಳಿದ್ದಾರೆ.

ಹೈಕಮಾಂಡ್ ಶಾಕ್, ಡಿಕೆಶಿಗೆ ನಿರಾಸೆ ಇತ್ತ ಕಾಂಗ್ರೆಸ್ ಹೈಕಮಾಂಡ್‌ನ ನಡೆ ಕೂಡ ಡಿಕೆ ಶಿವಕುಮಾರ್‌ಗೆ ನಿರಾಸೆ ತಂದಿದೆ. ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮಾತ್ರ ಆಹ್ವಾನ ನೀಡಿದ್ದು, ಡಿಸಿಎಂ ಡಿಕೆ ಶಿವಕುಮಾರ್‌ಗೆ ಆಹ್ವಾನ ಇಲ್ಲದಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಗಿದೆ. ಈ ಸಭೆಯಲ್ಲಿ ಸಿದ್ದರಾಮಯ್ಯ ಅವರು ಭರ್ಜರಿ ಬ್ಯಾಟ್ ಬೀಸಿದ್ದಾರೆ ಎನ್ನಲಾಗಿದ್ದು, ಹೈಕಮಾಂಡ್‌ನ ವಿಶ್ವಾಸ ಇನ್ನೂ ತಮ್ಮ ಪರವಿದೆ ಎಂಬ ಸಂದೇಶ ರವಾನಿಸಿದ್ದಾರೆ. ಒಟ್ಟಾರೆ, ಕೋಡಿಮಠದ ಭವಿಷ್ಯ, ಹೈಕಮಾಂಡ್‌ನ ಮೌನ ಹಾಗೂ ಸಿದ್ದರಾಮಯ್ಯ ಅವರ ನಡೆ ಈ ಮೂರು ಅಂಶಗಳು ಡಿಕೆ ಶಿವಕುಮಾರ್ ಅವರ ಸಿಎಂ ಕನಸಿಗೆ ತಾತ್ಕಾಲಿಕ ಬ್ರೇಕ್ ಬಿದ್ದಿದೆ ಎಂಬ ಸಂದೇಶವನ್ನು ನೀಡಿವೆ.

# ಸಮ್ಮಿಶ್ರ ಸರ್ಕಾರ ಬೇಡ: ಬಿಜೆಪಿ ಕಾರ್ಯಕರ್ತರ ನಿಲುವು ವಿಜಯೇಂದ್ರ





**ಬೆಂಗಳೂರು:** ಬಿಜೆಪಿ (BJP) ಸ್ವಂತ ಬಲದಲ್ಲಿ ಅಧಿಕಾರಕ್ಕೆ ಬರಬೇಕು ಅನ್ನೋ ನನ್ನ ಹೇಳಿಕೆ ಕಾರ್ಯಕರ್ತರ ಅಪೇಕ್ಷೆಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಸ್ಪಷ್ಟನೆ ಕೊಟ್ಟಿದ್ದಾರೆ. ತಮ್ಮ ಹೇಳಿಕೆಯಿಂದ ಮೈತ್ರಿಯಲ್ಲಿ ಗೊಂದಲ ಉಂಟಾಗಿರುವ ಬಗ್ಗೆ ಬೆಂಗಳೂರಿನಲ್ಲಿ ಮಾತಾಡಿದ ವಿಜಯೇಂದ್ರ, ಪ್ರತೀ ಚುನಾವಣೆಯಲ್ಲೂ ನಾವು ಸ್ಪಷ್ಟ ಬಹುಮತಕ್ಕೆ 5-10 ಸೀಟ್‌ಗಳಿಂದ ವಂಚಿತರಾಗಿದ್ದೀವಿ.

ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಬೇಕು ಅನ್ನೋದು ಕಾರ್ಯಕರ್ತರ ಅಪೇಕ್ಷೆ. ಮೊನ್ನೆ ನಡೆದ ಸ್ಥಳೀಯ ಚುನಾವಣೆಯಲ್ಲಿ ಬಿಜೆಪಿ ಬಹುಮತ ಪಡೆದಿದೆ. ಕಾರ್ಯಕರ್ತರ ಆಕಾಂಕ್ಷೆಯಂತೆ ಅಧ್ಯಕ್ಷನಾಗಿ ನಾನು ಮಾತಾಡೋದು ನನ್ನ ಕರ್ತವ್ಯ. ಅಂತಿಮವಾಗಿ ಕಾರ್ಯಕರ್ತರಿಗೆ ಏನು ಸಂದೇಶ ಕೊಡಬೇಕೋ ಕೊಟ್ಟಿದ್ದೇನೆ ಅಂತ ಹೇಳಿದ್ರು. ಇನ್ನು ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮೈತ್ರಿ ಇಲ್ಲ ಎಂಬ ದೇವೇಗೌಡರ ಹೇಳಿಕೆ ಕುರಿತು ಮಾತಾಡಿದ ವಿಜಯೇಂದ್ರ, ಮಾಜಿ ಪ್ರಧಾನಿ ದೇವೇಗೌಡರ ಬಗ್ಗೆ ನಮಗೆ ಗೌರವ ಇದೆ. ಅವರು ಮುತ್ಸದ್ದಿಗಳು. ದೇವೇಗೌಡರು ಮತ್ತು ಯಡಿಯೂರಪ್ಪ ಮಾತ್ರ ಹೋರಾಟದ ಹಿನ್ನೆಲೆಯಲ್ಲಿ ಬಂದವರು.

ಮೋದಿಯವರ ಕೈ ಬಲಪಡಿಸಲು ಅವರು ಎನ್‌ಡಿಎ ಮಿತ್ರ ಪಕ್ಷ ಆಗಿದ್ದಾರೆ. ದೇವೇಗೌಡರು ನಿನ್ನೆ ಮಾತಾಡಿರೋದಕ್ಕೆ ಸಂತೋಷ ಇದೆ. ವರಿಷ್ಠರು ಹೇಳೋದನ್ನು ನಾವು ಕೇಳ್ತೇವೆ, ಇದರಲ್ಲಿ ಯಾವುದೇ ಗೊಂದಲ ಇಲ್ಲ. ಮೈತ್ರಿ ಬಗ್ಗೆ ಹೈಕಮಾಂಡ್ ಮಾತು ಕೇಳ್ತೇವೆ. ದೇವೇಗೌಡರು ಹೇಳಿರೋದನ್ನು ತಪ್ಪಾಗಿ ಅರ್ಥೈಸುವ ಅಗತ್ಯ ಇಲ್ಲ. ಸ್ಥಳೀಯ ಚುನಾವಣೆಯಲ್ಲೂ ಮೈತ್ರಿ ಮಾಡಿಕೊಳ್ಳಬೇಕು ಅಂತ ಹೈಕಮಾಂಡ್ ಹೇಳಿದ್ರೆ, ಅದಕ್ಕೆ ನಾವೆಲ್ಲ ಬದ್ಧವಾಗಿರ್ತೇವೆ ಅಂದ್ರು. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮೈತ್ರಿ ಇರಲ್ಲ ಅಂತ ನಾನೆಲ್ಲೂ ಹೇಳಿಲ್ಲ. ಅಂತಿಮವಾಗಿ ನಮ್ಮ ಹೈಕಮಾಂಡ್, ದೇವೇಗೌಡರು, ಕುಮಾರಸ್ವಾಮಿ ಏನು ತೀರ್ಮಾನ ತಗೋತಾರೋ ಅದಕ್ಕೆ ಬದ್ಧವಾಗಿರ್ತೇವೆ ಅಂತ ವಿಜಯೇಂದ್ರ ಸ್ಪಷ್ಟ ಪಡಿಸಿದರು.

ಇದೇ ವೇಳೆ ಯಲಹಂಕದ ಕೋಗಿಲು ಲೇಔಟ್ ನಲ್ಲಿ ಅಕ್ರಮ ಮನೆಗಳ ತೆರವಿಗೆ ಕೇರಳ ಸಿಎಂ ಪಿಣರಾಯಿ ವಿಜಯನ್ ಆಕ್ಷೇಪ ಬಗ್ಗೆ ಮಾತಾಡಿದ ವಿಜಯೇಂದ್ರ, ಅಕ್ರಮ ಲೇಔಟ್ ತೆರವು ಬಗ್ಗೆ ಹೆಚ್ಚು ಚರ್ಚೆ ಬೇಡ. ಅದೇನಾದ್ರೂ ತಿಳಿದರೆ ಸಿಎಂ ಮತ್ತು ಜಮೀರ್ ಅವರೇ ಭೂಮಿ ಖರೀದಿ ಮಾಡಿ ಮುಸ್ಲಿಂ ಲೇಔಟ್ ಮಾಡಿಬಿಡ್ತಾರೆ ಅಂತ ಕುಟುಕಿದರು.

# ಮರ್ಡರ್ ಕೇಸ್ ತನಿಖೆ ವೇಳೆ ಖಾಕಿಗೇ ಶಾಕ್: ಬಯಲಾದ ಎರಡು ಪ್ರಕರಣಗಳು

**ಬೆಳಗಾವಿ:** ಗೋಕಾಕ್ ತಾಲೂಕಿನ ಘಟಪ್ರಭಾ ರೈಲ್ವೆ ನಿಲ್ದಾಣದ ಬಳಿ ಹತ್ಯೆಯಾದ ರೀತಿಯಲ್ಲಿ ಅಪರಿಚಿತ ವ್ಯಕ್ತಿಯೋರ್ವನ ಶವ ಪತ್ತೆ ಪ್ರಕಣ ತನಿಖೆ ವೇಳೆ ಪೊಲೀಸರೇ ದಂಗಾಗಿದ್ದಾರೆ. ಅಕ್ರಮ ಸಂಬಂಧದ ಕಾರಣಕ್ಕೆ ವ್ಯಕ್ತಿ ಕೊಲೆಯಾಗಿರೋದು ಗೊತ್ತಾಗಿದ್ದರೆ, ಆರೋಪಿ ಈ ಹಿಂದೆ ಮತ್ತೊಂದು ಮರ್ಡರ್ ಮಾಡಿ ಎಸ್ಕೇಪ್ ಆಗಿದ್ದ ಎಂಬುದೂ ಬಯಲಾಗಿದೆ. ಅಕ್ಟೋಬರ್ 22ರಂದು ಬೆಳಗಾವಿ ಜಿಲ್ಲೆಯ ಗೋಕಾಕ್ ತಾಲೂಕಿನ ಘಟಪ್ರಭಾ ರೈಲ್ವೆ ನಿಲ್ದಾಣದ ಬಳಿ ಹತ್ಯೆ ಮಾಡಿದ ರೀತಿಯಲ್ಲಿ ವ್ಯಕ್ತಿಯೋರ್ವರ ಶವ ಬೆತ್ತಲೆ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಮೃತನ ಗುರುತು ಪತ್ತೆಯಾಗದ ಕಾರಣ ಪೊಲೀಸರು ಫಿಂಗರ್ ಪ್ರಿಂಟ್ ಹಾಗೂ ಆತನ ಕೈ ಮೇಲಿದ್ದ ಟ್ಯಾಟೂ ಆಧಾರಿಸಿ ತನಿಖೆಗೆ ಮುಂದಾಗಿದ್ದಾರೆ.

ಈ ವೇಳೆ ಮೃತ ವ್ಯಕ್ತಿ ಅಥಣಿ ತಾಲೂಕಿನ ಮಹೇಶವಾಡಿ ಗ್ರಾಮದ ನಿವಾಸಿ ತುಕಾರಾಮ್ ಶಿಂಗೆ ಎಂಬುದು ಗೊತ್ತಾಗಿದೆ. ರಾಯಭಾಗ ತಾಲೂಕಿನ ಬೊಮ್ಮನಾಳ ಗ್ರಾಮದ ಮಾವನ ಮನೆಯಲ್ಲೇ ಬೆಳೆದಿದ್ದ ತುಕಾರಾಮ್, ರೇಲ್ವೆ ನಿಲ್ದಾಣದಲ್ಲಿ ಖಾಲಿ ಬಾಟಲ್ ಆರಿಸಿ ಗುಜರಿಗೆ ಹಾಕುವ ಕೆಲಸ ಮಾಡುತ್ತಿದ್ದ. ಮುಂದಿನ ತನಿಖೆ ಭಾಗವಾಗಿ ಅನುಮಾನದ ಆಧಾರದಲ್ಲಿ ಪೊಲೀಸರು ಘಟಪ್ರಭಾದ ಬಾರ್‌ಗಳ ಸಿಸಿ ಕ್ಯಾಮರಾಗಳನ್ನು ಪರಿಶೀಲಿಸಿದಾಗ ಬಾರ್‌ನಲ್ಲಿ ತುಕಾರಾಮ್ ಮದ್ಯ ಸೇವನೆ ಮಾಡ್ತಿರೋದು ಪತ್ತೆಯಾಗಿದೆ. ಈತನ ಜೊತೆ ಮತ್ತೊಬ್ಬ ಇರೋದು ಕೂಡ ಕಂಡಿದೆ. ಹೀಗಾಗಿ ಆತ ಯಾರೆಂಬ ಬಗ್ಗೆ ವಿಚಾರಣೆಗೆ ಇಳಿದಾಗ ತುಕಾರಾಮ್ ಜೊತೆಗೆ ಇದ್ದವ ಮಹಾರಾಷ್ಟ್ರ ಮೂಲದ ಆರೀಫ್ ಎಂಬ ಮಾಹಿತಿ ಪೊಲೀಸರಿಗೆ ಸಿಕ್ಕಿದೆ. ಪ್ರಕರಣ ಸಂಬಂಧ ಈತನ ವಿಚಾರಣೆ ನಡೆಸಿದಾಗ ಕೊಲೆಗೂ ನನಗೂ ಸಂಬಂಧ ಇಲ್ಲ ಎಂದಿದ್ದಾನೆ. ಆದರೆ, ಚಿಕ್ಕೋಡಿ ಮೂಲದ ಪ್ರದೀಪ್ ನಾಯಕ್ ಎಂಬಾತನ ಜೊತೆಗೆ ತುಕಾರಾಮ್ ಜಗಳವಾಡಿದ್ದ ಎನ್ನುವ ವಿಷಯ ಬಾಯ್ಬಿಟ್ಟಿದ್ದಾನೆ. ಹೀಗಾಗಿ ಪ್ರದೀಪ್ ಬಗ್ಗೆ ಮಾಹಿತಿ ಸಿಕ್ಕರೆ ತಿಳಿಸುವಂತೆ ಆರೀಫ್‌ಗೆ ಪೊಲೀಸರು ಸೂಚಿಸಿದ್ದಾರೆ.

ರೈಲುಗಳಲ್ಲಿ ಓಡಾಡುತ್ತಾ ಬಾಟಲಿಗಳನ್ನು ಸಂಗ್ರಹಿಸುತ್ತಿದ್ದ ಪ್ರದೀಪ್ ಮಹಾರಾಷ್ಟ್ರದ ಪುಣೆಯ ಬಳಿಯ ನೀರಾ ರೈಲ್ವೆ ನಿಲ್ದಾಣಕ್ಕೆ ಬಂದಿರೋ ಮಾಹಿತಿಯನ್ನು ಆರಿಫ್ ಪೊಲೀಸರಿಗೆ ತಿಳಿಸಿದ್ದು, ಖಾಕಿ ಟೀಂ ನೀರಾ ರೈಲು ನಿಲ್ದಾಣ ತಲುಪಿ ಪ್ರದೀಪ್ ಬಂಧನಕ್ಕೆ ಮುಂದಾಗಿದೆ. ಆದರೆ ಈ ವೇಳೆ ಆತ ಎಸ್ಕೇಪ್ ಆಗಿದ್ದು, ಮಹಾರಾಷ್ಟ್ರದ ಔಟ್ ಪೋಸ್ಟ್ ಪೊಲೀಸರ ಸಹಾಕಾರದಿಂದಾಗಿ ಕೊನೆಗೂ ಆರೋಪಿ ಬಂಧಿಸುವಲ್ಲಿ ಪೊಲೀಸರು ಸಕ್ಸಸ್ ಆಗಿದ್ದಾರೆ. ವಿಚಾರಣೆ ವೇಳೆ ತುಕಾರಾಮ್ ಸತ್ಯ ಬಾಯ್ಬಿಟ್ಟಿದ್ದು, ತನ್ನ ಪ್ರೇಯಸಿ ಜೊತೆಗೆ ತುಕಾರಾಮ್‌ಗೆ ಅನೈತಿಕ ಸಂಬಂಧ ಇತ್ತು.

ಅದೇ ಕಾರಣಕ್ಕೆ ಆತ ಕೊಲೆ ಮಾಡಿರೋದಾಗಿ ತಪ್ಪೊಪ್ಪಿಕೊಂಡಿದ್ದಾನೆ. ಆರೋಪಿ ಪ್ರದೀಪ್ ವಿಚಾರಣೆ ವೇಳೆ ಮತ್ತೊಂದು ಕೊಲೆ ರಹಸ್ಯವೂ ರಿವೀಲ್ ಆಗಿದೆ. 2022ರಲ್ಲಿ ಹುಬ್ಬಳ್ಳಿ ರೈಲು ನಿಲ್ದಾಣದಲ್ಲಿ ಬುಲ್ಲಿ ಮಹಾದೇವ ಎಂಬವರನ್ನು ಕೊಲೆ ಮಾಡಿ ಚರಂಡಿಯಲ್ಲಿ ಎಸೆಯಲಾಗಿತ್ತು. ಸರಿಯಾದ ಸಾಕ್ಷ್ಯಾಧಾರಗಳು ಸಿಗದ ಕಾರಣ ರೈಲ್ವೆ ಪೊಲೀಸರು ಕೇಸ್ ಕ್ಲೋಸ್ ಮಾಡಿದ್ದರು. ಈ ಕೊಲೆಯನ್ನೂ ತಾನೇ ಮಾಡಿರೋದಾಗಿ ಪ್ರದೀಪ್ ಒಪ್ಪಿಕೊಂಡಿದ್ದು, ಆ ಮೂಲಕ ಹಳೆಯ ಕೇಸ್ ಕೂಡ ರೀ ಓಪನ್ ಆಗಿದೆ.

# ಒಂದೇ ಬೈಕ್‌ನಲ್ಲಿ ನಾಲ್ವರು ಯುವಕರು ದುರ್ಮರಣ

**ಚಿಕ್ಕಬಳ್ಳಾಪುರ:** ಟಿಪ್ಪರ್ ಮತ್ತು ಬೈಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಒಂದೇ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಯುವಕರು ಸ್ಥಳದಲ್ಲೇ ಸಾವನ್ನಪ್ಪಿರುವ ದುರ್ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಅಜ್ಜವಾರ ಗ್ರಾಮದ ಗೇಟ್ ಬಳಿ ನಡೆದಿದೆ. ರಾಜ್ಯ ಸರ್ಕಾರ ಮೃತರ ಕುಟುಂಬಗಳಿಗೆ ಪರಿಹಾರ ಘೋಷಣೆ ಮಾಡಿದೆ.

ಅಪಘಾತವು ನಿನ್ನೆ ತಡರಾತ್ರಿ ಸಂಭವಿಸಿದ್ದು, ಅತಿವೇಗವಾಗಿ ಬಂದ ಟಿಪ್ಪರ್ ವಾಹನವು ಎದುರಿನಿಂದ ಬಂದ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ತೀವ್ರತೆಗೆ ಬೈಕ್ ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು, ಅದರಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಯುವಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮೃತರೆಲ್ಲರೂ ಅಜ್ಜವಾರ ಗ್ರಾಮದ ನಿವಾಸಿಗಳಾಗಿದ್ದು, ಒಂದೇ ಬೈಕ್‌ನಲ್ಲಿ ನಾಲ್ವರು ಪ್ರಯಾಣಿಸುತ್ತಿದ್ದರು. ಘಟನೆಯ ಮಾಹಿತಿ ತಿಳಿದ ಕೂಡಲೇ ಚಿಕ್ಕಬಳ್ಳಾಪುರ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ಈ ದುರ್ಘಟನೆಯ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮೃತರ ಕುಟುಂಬಗಳಿಗೆ ತಲಾ 5 ಲಕ್ಷ ರೂ. ಪರಿಹಾರ ನೀಡುವುದಾಗಿ ಘೋಷಿಸಿದ್ದಾರೆ. ಈ ಕುರಿತು ತಮ್ಮ ಸಾಮಾಜಿಕ ಜಾಲತಾಣ 'ಎಕ್ಸ್' ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಸಿಎಂ, "ಚಿಕ್ಕಬಳ್ಳಾಪುರ ನಗರದ ಹೊರವಲಯದ ಅಜ್ಜವಾರ ರಸ್ತೆಯಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ನಾಲ್ವರು ಯುವಕರು ಸಾವಿಗೀಡಾದ ವಿಚಾರ ತಿಳಿದು ಅತೀವ ದುಃಖವಾಯಿತು. ಮೃತರ ಆತ್ಮಕ್ಕೆ ಶಾಂತಿ ಸಿಗಲಿ. ಕ್ರಿಸ್ಮಸ್ ಸಂಭ್ರಮದಲ್ಲಿದ್ದ ಕುಟುಂಬಗಳು ಇಂದು ಸೂತಕದ ಮನೆಗಳಾಗಿ ಮಾರ್ಪಟ್ಟಿರುವುದು ಅತ್ಯಂತ ದುರದೃಷ್ಟಕರ.



ಕುಟುಂಬದ ಆಧಾರವಾಗಿದ್ದ ಈ ಯುವಕರ ನಿಧನದಿಂದ ಸಂಕಷ್ಟದಲ್ಲಿರುವ ಕುಟುಂಬಗಳಿಗೆ ತಲಾ 5 ಲಕ್ಷ ರೂ. ಪರಿಹಾರ ನೀಡಲಾಗುವುದು" ಎಂದು ತಿಳಿಸಿದ್ದಾರೆ. ಇನ್ನೊಂದೆಡೆ, ಚಿಕ್ಕಬಳ್ಳಾಪುರ ಸಂಸದ ಡಾ. ಕೆ. ಸುಧಾಕರ್ ಅವರು ಅಜ್ಜವಾರ ಗ್ರಾಮಕ್ಕೆ ಭೇಟಿ ನೀಡಿ ಮೃತ ಯುವಕರ ಅಂತಿಮ ದರ್ಶನ ಪಡೆದಿದ್ದಾರೆ. ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ಅವರು, ವೈಯಕ್ತಿಕವಾಗಿ ತಲಾ 50 ಸಾವಿರ ರೂ. ಪರಿಹಾರ ನೀಡುವುದಾಗಿ ಘೋಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದ ಸುಧಾಕರ್, "ಇದು ಅತ್ಯಂತ ಆಘಾತಕಾರಿ ಘಟನೆ. ಒಂದೇ ಕುಟುಂಬದ ಅಣ್ಣ-ತಮ್ಮಂದಿರಿಬ್ಬರೂ ಈ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ತಾಯಿಗೆ ಆಧಾರವಾಗಿದ್ದ ಗಂಡು ಮಕ್ಕಳು ಒಂದೇ ಕ್ಷಣದಲ್ಲಿ ಕಳೆದುಹೋದರೆ ಆಕೆಯ ಸ್ಥಿತಿ ಊಹಿಸಲು ಕೂಡ ಸಾಧ್ಯವಿಲ್ಲ. ಇಂತಹ ನೋವು ಯಾವ ತಾಯಿಗೂ ಬರಬಾರದು" ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಪರಿಹಾರ ಘೋಷಿಸಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಭಿನಂದನೆ ಸಲ್ಲಿಸಿದ ಅವರು, ಕೇಂದ್ರ ಸರ್ಕಾರ ಹಾಗೂ ಪ್ರಧಾನಿಗಳಿಗೂ ಮೃತ ಕುಟುಂಬಗಳಿಗೆ ಹೆಚ್ಚುವರಿ ಪರಿಹಾರ ನೀಡುವಂತೆ ಮನವಿ ಮಾಡಿಕೊಂಡಿರುವುದಾಗಿ ತಿಳಿಸಿದರು.

# ತಡರಾತ್ರಿ ಮೂವರು ಪುಂಡರಿಂದ ಯುವತಿಗೆ ಕಿರುಕುಳ


**ಬೆಂಗಳೂರು:** ತಡರಾತ್ರಿ ಮೂವರು ಪುಂಡರು ಯುವತಿಗೆ ಕಿರುಕುಳ ನೀಡಿರುವ ಘಟನೆ ಬೆಂಗಳೂರಿನ ಬಿಟಿಎಂ ಲೇಔಟ್‌ನಲ್ಲಿ ನಡೆದಿದೆ. ಸ್ಕೂಟಿಯಲ್ಲಿ ಹೆಲ್ಮೆಟ್ ಧರಿಸಿ ಹೋಗುತ್ತಿದ್ದ ಯುವತಿಗೆ ಮತ್ತೊಂದು ಸ್ಕೂಟಿಯಲ್ಲಿ ಬಂದ ಮೂವರು ಯುವಕರು ಸುಮಾರು 2 ಕಿಲೋ ಮೀಟರ್ ರಸ್ತೆಯುದ್ದಕ್ಕೂ ಕಿರುಕುಳ ನೀಡಿದ್ದಾರೆ.



ರಾತ್ರಿ 12 ಗಂಟೆಯ ಸುಮಾರಿಗೆ ಘಟನೆ ನಡೆದಿದೆ ಹೆಲ್ಮೆಟ್ ಕೂಡ ಧರಿಸದೇ ಅಡ್ಡಾದಿಡ್ಡಿ ಚಾಲನೆ ಮಾಡಿದ ಪುಂಡರು ಬೇಕು ಅಂತಲೇ ಯುವತಿಯ ಸ್ಕೂಟಿಯ ಮುಂದೆ ಹೋಗಿ ಅಡ್ಡಾದಿಡ್ಡಿಯಾಗಿ ಸ್ಕೂಟಿ ಚಾಲನೆ ಮಾಡಿದ್ದಾರೆ. ಅಲ್ಲದೇ 2 ಕಿ.ಮೀ ಯುವತಿಯನ್ನು ಫಾಲೋ ಮಾಡಿದ್ದಾರೆ. ಇದೇ ವೇಳೆ ಹಿಂಬದಿ ಕಾರಿನಲ್ಲಿ ಬರುತ್ತಿದ್ದ ವ್ಯಕ್ತಿಯೊಬ್ಬರು ಯುವತಿಗೆ ಕಿರುಕುಳ ನೀಡುತ್ತಿರುವ ವೀಡಿಯೋ ಸೆರೆ ಹಿಡಿದು ಎಕ್ಸ್‌ನಲ್ಲಿ ಪೊಲೀಸರಿಗೆ ಟ್ಯಾಗ್ ಮಾಡಿ ಪೋಸ್ಟ್ ಮಾಡಿದ್ದಾರೆ. ಸದ್ಯ ಸುದ್ದುಗುಂಟೆ ಪಾಳ್ಯ ಪೊಲೀಸರು ಈ ವೀಡಿಯೋಗೆ ಎಕ್ಸ್‌ನಲ್ಲಿ ಉತ್ತರಿಸಿದ್ದಾರೆ.

ಕಿರುಕುಳ ನೀಡಿದ ಪುಂಡರ ಬೈಕ್ ನಂಬರ್ ಪತ್ತೆ ಮಾಡಿದ್ದು, ಮೂವರನ್ನು ವಿಚಾರಣೆ ಮಾಡೋದಾಗಿ ಉತ್ತರ ನೀಡಿದ್ದಾರೆ.


# ಕುಡಿದ ಮತ್ತಲ್ಲಿ ಕಿರಿಕ್: ಬಾಯಿ ಚಪಲಕ್ಕೆ ಬಿಹಾರ ಮೂಲದ ಕಾರ್ಮಿಕ ಬಲಿ



**ಕೋಲಾರ:** ಕುಡಿದ ಮತ್ತಲ್ಲಿ ಕಾರ್ಮಿಕರ ನಡುವೆ ನಡೆದ ಕಿರಿಕ್ ಓರ್ವನ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ಕೋಲಾರದ ವೇಮಗಲ್ ಕೈಗಾರಿಕಾ ಪ್ರದೇಶದ ಬಳಿ ಇರುವ ಕುರುಗಲ್ ಗೇಟ್‌ನಲ್ಲಿ ನಡೆದಿದೆ. ಬಿಹಾರ ಮೂಲದ ಕಾರ್ಮಿಕ ಸಂದೀಪ್ ಸಿಂಗ್ ಮೃತ ದುರ್ದೈವಿಯಾಗಿದ್ದು, ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಕಳೆದ ರಾತ್ರಿ, ಕುರುಗಲ್ ಗೇಟ್ ಬಳಿ ಕಾರ್ಮಿಕ ಸಂದೀಪ್ ಸಿಂಗ್, ಅಡುಗೆ ಕೆಲಸ ಮಾಡುತ್ತಿದ್ದ ಬಳ್ಳಾರಿ ಮೂಲದ ರಾಜಾ ರೆಡ್ಡಿ, ಲೇಬರ್ ಕಾಂಟ್ರಾಕ್ಟ್ ಏಜೆಂಟ್ ಆಗಿದ್ದ ಅನಿರುದ್ ಮತ್ತು ಬೆಂಗಳೂರು ಮೂಲದ ಮನೋಜ್ ಎಲ್ಲರೂ ಸೇರಿ ಎಣ್ಣೆ ಪಾರ್ಟಿ ಮಾಡಿದ್ದಾರೆ.

ಈ ವೇಳೆ ಕ್ಷುಲ್ಲಕ ಕಾರಣಕ್ಕೆ ಸಂದೀಪ್ ಸಿಂಗ್ ಹಾಗೂ ರಾಜಾರೆಡ್ಡಿ ನಡುವೆ ಗಲಾಟೆ ಆರಂಭವಾಗಿದೆ. ಸಂದೀಪ್ ಸಿಂಗ್ ಅವಾಚ್ಯ ಶಬ್ದಗಳಿಂದ ನಿಂದಿಸಿದ



ಪರಿಣಾಮ ರೊಚ್ಚಿಗೆದ್ದ ರಾಜಾರೆಡ್ಡಿ ಹಾಗೂ ಮನೋಜ್ ಇಬ್ಬರೂ ಸೇರಿ ಸಂದೀಪ್ ಸಿಂಗ್ ಮೇಲೆ ಹಲ್ಲೆ ಮಾಡಿದ್ದಾರೆ. ಚಾಕುವಿನಿಂದ ಇರಿದಿದ್ದಾರೆ. ಬಳಿಕ ಗಾಯಾಳುವನ್ನು ಅವರೇ ಬೈಕ್ ಮೂಲಕ ಆಸ್ಪತ್ರೆಗೆ ಕರೆದುಕೊಂಡು ಹೊರಟ್ಟಿದ್ದರು.

ಈ ವೇಳೆ ಸಂದೀಪ್ ಸಿಂಗ್ ಬಾಯಿ ಚಪಲ ಆತನ ಪ್ರಾಣಕ್ಕೇ ಕುತ್ತು ತಂದಿದೆ. ನಾನು ಹುಷಾರಾದ ಮೇಲೆ ನಿಮ್ಮನ್ನು, ನಿಮ್ಮ ಕುಟುಂಬದವರನ್ನು ಬಿಡೋದಿಲ್ಲ ಎಂದು ಸಂದೀಪ್ ಸಿಂಗ್ ಧಮ್ಕಿ ಹಾಕಿದ್ದಾನೆ. ಆಸ್ಪತ್ರೆಗೆ ತೆರಳುತ್ತಿದ್ದ ಮಾರ್ಗಮಧ್ಯೆ ಈತ ಆಡಿದ ಮಾತುಗಳು ಆರೋಪಿಗಳನ್ನು ಮತ್ತೆ ಕೆರಳಿಸಿದೆ. ಕೂಡಲೇ ಸಂದೀಪ್ ಸಿಂಗ್‌ನ ಬೈಕ್ ನಿಂದ ಇಳಿಸಲಾಗಿದ್ದು, ರಾಜಾರೆಡ್ಡಿ, ಮನೋಜ್ ಮತ್ತು ಅನಿರುದ್ ಆತನ ಕುತ್ತಿಗೆ ಕೊಯ್ದಿದ್ದಾರೆ.

ಬಳಿಕ ತಲೆ ಮೇಲೆ ಕಲ್ಲು ಎತ್ತಿಹಾಕಿ ಕೊಲೆ ಮಾಡಿದ್ದಾರೆ. ನಂತರ ತಾವೇ ಕರೆ ಮಾಡಿ ವಿಷಯ ತಿಳಿಸಿ ಪರಾರಿಯಾಗಿದ್ದ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.